ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 135 Tuesday **10-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 135 ಮಂಗಳವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಹಬ್ಬದ ಸಂಭ್ರಮ ಸಾರ್ವಜನಿಕರದ್ದು, ಕಸ ತೆಗೆಯುವ ಹೊರೆ ಪೌರಕಾರ್ಮಿಕರದ್ದು!

ಹಬ್ಬ ಮುಗಿದ ಬಳಿಕ ರಸ್ತೆಗಳಲ್ಲಿ ಪಟಾಕಿ ತ್ಯಾಜ್ಯದ ರಾಶಿ; ಪೌರಕಾರ್ಮಿಕರ ಶ್ರಮಕ್ಕೆ ಬೆಲೆ ಕಟ್ಟುವವರಾರು?

“ಮುಂಜಾನೆಯ ಮೆರಗು”

ಜಗಳೂರು ನ, 09– ಹಬ್ಬವೆಂದರೆ ಸಂಭ್ರಮ, ಸಡಗರ, ಸಂತೋಷದ ಆಚರಣೆ. ದೀಪಾವಳಿ ಸೇರಿದಂತೆ ವಿವಿಧ ಹಬ್ಬಗಳ ಸಂದರ್ಭದಲ್ಲಿ ಸಾರ್ವಜನಿಕರು ಪಟಾಕಿ ಸಿಡಿಸಿ ಸಂಭ್ರಮಿಸುವುದು ಸಾಮಾನ್ಯ. ಆದರೆ ಹಬ್ಬದ ಸಂಭ್ರಮ ಮುಗಿದ ಬಳಿಕ ಅದರ ಪರಿಣಾಮವಾಗಿ ರಸ್ತೆಗಳು, ವೃತ್ತಗಳು, ಸಾರ್ವಜನಿಕ ಸ್ಥಳಗಳಲ್ಲಿ ಹರಡಿರುವ ಪಟಾಕಿಗಳ ತ್ಯಾಜ್ಯವನ್ನು ತೆರವುಗೊಳಿಸುವ ಹೊಣೆ ಮಾತ್ರ ಪಟ್ಟಣ ಪಂಚಾಯಿತಿಯ ಪೌರಕಾರ್ಮಿಕರ ಹೆಗಲ ಮೇಲೆ ಬೀಳುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ.

ಹಬ್ಬದ ದಿನಗಳಲ್ಲಿ ಬೆಳಕಿನ ಹಬ್ಬದ ಸಂಭ್ರಮದಲ್ಲಿ ಮುಳುಗುವ ಸಾರ್ವಜನಿಕರು ಪಟಾಕಿಗಳನ್ನು ಖರೀದಿಸಿ ರಸ್ತೆಗಳು, ಮನೆಗಳ ಮುಂಭಾಗ, ಅಂಗಡಿಗಳ ಮುಂದೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಿಡಿಸುತ್ತಾರೆ. ಬಣ್ಣಬಣ್ಣದ ಪಟಾಕಿಗಳ ಬೆಳಕು, ಶಬ್ದದ ನಡುವೆ ಸಂಭ್ರಮಿಸುತ್ತಾರೆ. ಆದರೆ ಪಟಾಕಿ ಸಿಡಿಸಿದ ನಂತರ ಉಳಿಯುವ ಕಾಗದದ ಚೂರುಗಳು, ಸುಟ್ಟ ಪಟಾಕಿಗಳ ಅವಶೇಷಗಳು, ಪ್ಲಾಸ್ಟಿಕ್ ಹೊದಿಕೆಗಳು ಹಾಗೂ ಇತರೆ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡಿ ತಮ್ಮ ಜವಾಬ್ದಾರಿಯನ್ನು ಮರೆತುಬಿಡುತ್ತಾರೆ.

ಹಬ್ಬದ ಮರುದಿನ ಬೆಳಗ್ಗೆ ಪಟ್ಟಣದ ಪ್ರಮುಖ ರಸ್ತೆಗಳು, ವೃತ್ತಗಳು, ಮಾರುಕಟ್ಟೆ ಪ್ರದೇಶಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಪಟಾಕಿಗಳ



ತ್ಯಾಜ್ಯ ಚೆಲ್ಲಾಪಿಲ್ಲಿಯಾಗಿ ಬಿದ್ದಿರುತ್ತದೆ. ಇಂತಹ ಸಂದರ್ಭದಲ್ಲಿ ಬೆಳಗಿನ ಜಾವವೇ ಕೆಲಸಕ್ಕೆ ಹಾಜರಾಗುವ ಪೌರಕಾರ್ಮಿಕರು ರಸ್ತೆಗಳ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುತ್ತಾರೆ. ಸಾರ್ವಜನಿಕರು ಸಂಭ್ರಮದಿಂದ ಆಚರಿಸಿದ ಹಬ್ಬದ ನಂತರ ಉಳಿದಿರುವ ಕಸವನ್ನು ಗುಡಿಸಿ, ಸಂಗ್ರಹಿಸಿ, ವಿಲೇವಾರಿ ಮಾಡುವ ಮೂಲಕ ಪಟ್ಟಣವನ್ನು ಮತ್ತೆ ಸ್ವಚ್ಛಗೊಳಿಸುತ್ತಾರೆ.

ಸಂಭ್ರಮಿಸುವವರು ಸಾರ್ವಜನಿಕರು, ಸ್ವಚ್ಛಗೊಳಿಸುವವರು ಪೌರಕಾರ್ಮಿಕರು!

ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿಸುವಾಗ ಸಾರ್ವಜನಿಕರಿಗೆ ತಮ್ಮ ಸಂತೋಷವೇ ಮುಖ್ಯವಾಗುತ್ತದೆ. ಆದರೆ ಅದರಿಂದ ಉಂಟಾಗುವ ತ್ಯಾಜ್ಯವನ್ನು ವಿಲೇವಾರಿ ಮಾಡುವ ಬಗ್ಗೆ ಹೆಚ್ಚಿನವರು ಯೋಚಿಸುವುದಿಲ್ಲ. ತಾವು ಸಿಡಿಸಿದ ಪಟಾಕಿಗಳ ಕಸವನ್ನು ತಾವೇ ಸಂಗ್ರಹಿಸಿ ನಿಗದಿತ ಸ್ಥಳದಲ್ಲಿ ಹಾಕುವ ಕನಿಷ್ಠ ಜವಾಬ್ದಾರಿಯನ್ನೂ ಕೆಲವರು ನಿರ್ವಹಿಸುವುದಿಲ್ಲ. ಹೀಗಾಗಿ ಸಾರ್ವಜನಿಕರ ನಿರ್ಲಕ್ಷ್ಯದ ಪರಿಣಾಮ ಪೌರಕಾರ್ಮಿಕರು ಹೆಚ್ಚುವರಿ ಶ್ರಮ ವಹಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ.

ಪೌರಕಾರ್ಮಿಕರ ಶ್ರಮಕ್ಕೆ ಗೌರವ ಬೇಕು:

ಪಟ್ಟಣದ ಸ್ವಚ್ಛತೆ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಬಿಸಿಲು, ಮಳೆ ಎನ್ನದೆ ಪ್ರತಿದಿನ ಬೆಳಗ್ಗಿನಿಂದಲೇ ರಸ್ತೆಗಳು, ಚರಂಡಿಗಳು, ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸುವ ಅವರು ಪಟ್ಟಣದ ಆರೋಗ್ಯ ಮತ್ತು ಪರಿಸರ ಸಂರಕ್ಷಣೆಯ ಪ್ರಮುಖ ಕೊಂಡಿಯಾಗಿದ್ದಾರೆ. ಹಬ್ಬದ ದಿನಗಳಲ್ಲಿಯೂ ವಿಶ್ರಾಂತಿಯಿಲ್ಲದೆ ಸಾರ್ವಜನಿಕರ ಅನುಕೂಲಕ್ಕಾಗಿ ಕಾರ್ಯನಿರ್ವಹಿಸುತ್ತಾರೆ. ಆದರೆ ಅವರ ಶ್ರಮವನ್ನು ಗುರುತಿಸುವ ಮತ್ತು ಗೌರವಿಸುವ ಮನೋಭಾವ ಸಾರ್ವಜನಿಕರಲ್ಲಿ ಇನ್ನಷ್ಟು ಬೆಳೆಯಬೇಕಿದೆ.

ಪಟಾಕಿಗಳ ಅವಶೇಷಗಳನ್ನು ಸಂಗ್ರಹಿಸುವಾಗ ಪೌರಕಾರ್ಮಿಕರು ಕೈಗಳಿಗೆ ಗಾಯವಾಗುವ ಸಾಧ್ಯತೆಯೂ ಇದೆ. ಸಂಪೂರ್ಣವಾಗಿ ಸಿಡಿಯದ ಪಟಾಕಿಗಳು ಅಥವಾ ಉಳಿದಿರುವ ಸ್ಫೋಟಕ ಅವಶೇಷಗಳು ಅಪಾಯಕಾರಿಯಾಗಬಹುದು. ಆದ್ದರಿಂದ ಪಟಾಕಿಗಳ ತ್ಯಾಜ್ಯವನ್ನು ಸಾಮಾನ್ಯ ಕಸದೊಂದಿಗೆ ಬೆರೆಸದೆ ಸುರಕ್ಷಿತವಾಗಿ ಸಂಗ್ರಹಿಸುವುದು ಅಗತ್ಯವಾಗಿದೆ. ಪೌರಕಾರ್ಮಿಕರಿಗೆ ಅಗತ್ಯ ಕೈಗವಸು, ಮುಖಗವಸು ಹಾಗೂ ಸುರಕ್ಷತಾ ಪರಿಕರಗಳನ್ನು ಒದಗಿಸುವ ಜವಾಬ್ದಾರಿಯೂ ಸಂಬಂಧಪಟ್ಟ ಸ್ಥಳೀಯ ಆಡಳಿತದ ಮೇಲಿದೆ.

ಸ್ವಚ್ಛತೆ ಪಟ್ಟಣ ಪಂಚಾಯಿತಿಯೊಂದರ ಹೊಣೆಯಲ್ಲ:

ಪಟ್ಟಣವನ್ನು ಸ್ವಚ್ಛವಾಗಿಡುವುದು ಪಟ್ಟಣ ಪಂಚಾಯಿತಿಯ ಕರ್ತವ್ಯ ಎಂಬುದು ನಿಜ. ಆದರೆ ಸಾರ್ವಜನಿಕರು ಮನಬಂದಂತೆ ಕಸ ಎಸೆದು, ಎಲ್ಲವನ್ನೂ ಪೌರಕಾರ್ಮಿಕರೇ ಸ್ವಚ್ಛಗೊಳಿಸಲಿ ಎಂದು ನಿರೀಕ್ಷಿಸುವುದು ಸರಿಯಾದ ನಾಗರಿಕ ಮನೋಭಾವವಲ್ಲ. ಸ್ವಚ್ಛತೆ ಎನ್ನುವುದು ಕೇವಲ ಆಡಳಿತದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಕರ್ತವ್ಯವೂ ಆಗಿದೆ.

ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿಸುವ ಸ್ಥಳದಲ್ಲಿಯೇ ತ್ಯಾಜ್ಯ ಸಂಗ್ರಹಿಸಲು ವ್ಯವಸ್ಥೆ



ಕಲ್ಪಿಸುವುದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಪಟಾಕಿ ವ್ಯಾಪಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಚ್ಛತೆಯ ಕುರಿತು ಅರಿವು ಮೂಡಿಸುವುದು ಅಗತ್ಯವಾಗಿದೆ. ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಬ್ಬದ ನಂತರ ವಿಶೇಷ ಸ್ವಚ್ಛತಾ ಕಾರ್ಯಾಚರಣೆ ಕೈಗೊಳ್ಳುವುದರ ಜೊತೆಗೆ ಸಾರ್ವಜನಿಕರ ಸಹಕಾರವನ್ನೂ ಪಡೆದುಕೊಳ್ಳಬೇಕಿದೆ.

ಸಾರ್ವಜನಿಕರಿಗೆ ಕಿವಿಮಾತು:

ಹಬ್ಬವನ್ನು ಸಂತೋಷದಿಂದ ಆಚರಿಸುವುದರಲ್ಲಿ ತಪ್ಪಿಲ್ಲ. ಆದರೆ ನಮ್ಮ ಸಂತೋಷ ಬೇರೆಯವರಿಗೆ ಹೊರೆಯಾಗಬಾರದು. ನಾವು ಸಿಡಿಸಿದ ಪಟಾಕಿಗಳ ತ್ಯಾಜ್ಯವನ್ನು ನಾವೇ ಸಂಗ್ರಹಿಸಿ ವಿಲೇವಾರಿ ಮಾಡುವ ಸಂಸ್ಕೃತಿ ಬೆಳೆಸಿಕೊಳ್ಳಬೇಕು. ಪೌರಕಾರ್ಮಿಕರನ್ನು ಕೇವಲ ಕಸ ತೆಗೆಯುವವರಂತೆ ನೋಡದೆ, ಪಟ್ಟಣದ ಸ್ವಚ್ಛತೆಯ ನಿಜವಾದ ಸೇವಕರಾಗಿ ಗೌರವಿಸಬೇಕು.

ಹಬ್ಬದ ಬೆಳಕು ಮನೆಗಳನ್ನು ಮಾತ್ರವಲ್ಲ, ನಮ್ಮ ಮನಸ್ಸುಗಳನ್ನೂ ಬೆಳಗಿಸಲಿ. ಸ್ವಚ್ಛತೆಯ ಜವಾಬ್ದಾರಿಯನ್ನು ಇತರರ ಮೇಲೆ ಹಾಕದೆ ನಾವೇ ಹೊತ್ತುಕೊಳ್ಳುವ ಮನೋಭಾವ ಬೆಳೆಸಿಕೊಳ್ಳೋಣ.

ಕೊನೆಯದಾಗಿ, ಪಟಾಕಿ ಸಿಡಿಸುವ ಸಂಭ್ರಮ ನಮ್ಮದಾದರೆ, ಅದರ ತ್ಯಾಜ್ಯವನ್ನು ಸ್ವಚ್ಛಗೊಳಿಸುವ ಜವಾಬ್ದಾರಿಯೂ ನಮ್ಮದೇ ಆಗಬೇಕು. ಪೌರಕಾರ್ಮಿಕರ ಶ್ರಮಕ್ಕೆ ಗೌರವ ನೀಡುವುದೇ ನಿಜವಾದ ಹಬ್ಬದ ಆಚರಣೆಯಾಗಲಿ. ಸ್ವಚ್ಛ ಜಗಳೂರು ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಲಿ.

ನಾಡಿನ ಪ್ರತಿಯೊಂದು ಮನೆಗಳಲ್ಲೂ ಸುಖ, ಶಾಂತಿ, ಸಮೃದ್ಧಿ ನೆಲೆಸಲಿ: ಮಾಜಿ ಶಾಸಕ ಹೆಚ್.ಪಿ. ರಾಜೇಶ್

“ಮುಂಜಾನೆಯ ಮೆರಗು”

ಜಗಳೂರು, ನ.09– ದೀಪಾವಳಿ ಹಬ್ಬದ ಪ್ರಯುಕ್ತ ಮಾಜಿ ಶಾಸಕರಾದ ಹೆಚ್.ಪಿ. ರಾಜೇಶ್ ಅವರು ದಾವಣಗೆರೆ ಹಾಗೂ ಜಗಳೂರು ಪಟ್ಟಣಗಳಲ್ಲಿ ಆಯೋಜಿಸಿದ್ದ ವಿವಿಧ ಲಕ್ಷ್ಮಿ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ತಾಯಿ ಲಕ್ಷ್ಮೀದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ವಿವಿಧ ವ್ಯಾಪಾರಸ್ಥರು, ಉದ್ಯಮಿಗಳು ಹಾಗೂ ಸಾರ್ವಜನಿಕರು ಆಯೋಜಿಸಿದ್ದ ಲಕ್ಷ್ಮಿ ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು, ಭಕ್ತಿಭಾವದಿಂದ ಪೂಜಾ ಕೈಂಕರ್ಯಗಳಲ್ಲಿ ಭಾಗಿಯಾದರು. ದೀಪಾವಳಿ ಹಬ್ಬವು ಬೆಳಕಿನ ಹಬ್ಬವಾಗಿದ್ದು, ಪ್ರತಿಯೊಬ್ಬರ ಜೀವನದಲ್ಲಿಯೂ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿಯ ಬೆಳಕು ಮೂಡಿಸಲಿ ಎಂದು ಪ್ರಾರ್ಥಿಸಿದರು.

ಬಳಿಕ ಮಾತನಾಡಿದ ಅವರು, ದೀಪಾವಳಿ ಹಬ್ಬವು ಕತ್ತಲೆಯನ್ನು ದೂರಮಾಡಿ ಬೆಳಕನ್ನು ಪಸರಿಸುವ, ಕೆಟ್ಟದ್ದರ ವಿರುದ್ಧ ಒಳ್ಳೆಯತನದ ವಿಜಯವನ್ನು ಸಾರುವ ಪವಿತ್ರ ಹಬ್ಬವಾಗಿದೆ. ಈ ಹಬ್ಬವು ಕುಟುಂಬದ ಸದಸ್ಯರು ಹಾಗೂ ಸಮಾಜದ ಎಲ್ಲ ವರ್ಗದ ಜನರಲ್ಲಿ ಪ್ರೀತಿ, ವಿಶ್ವಾಸ, ಸೌಹಾರ್ದತೆ ಮತ್ತು ಸಹೋದರತ್ವವನ್ನು ಮತ್ತಷ್ಟು ಗಟ್ಟಿಗೊಳಿಸಲಿ ಎಂದರು.

ನಾಡಿನ ಪ್ರತಿಯೊಂದು ಮನೆಗಳಲ್ಲೂ ತಾಯಿ ಲಕ್ಷ್ಮೀದೇವಿಯ ಕೃಪೆಯಿಂದ ಆರ್ಥಿಕ ಸಮೃದ್ಧಿ, ಆರೋಗ್ಯ, ಸಂತೋಷ ಹಾಗೂ ನೆಮ್ಮದಿ ಸದಾ ನೆಲೆಸಲಿ. ರೈತರು, ವ್ಯಾಪಾರಸ್ಥರು, ಕಾರ್ಮಿಕರು ಸೇರಿದಂತೆ ಸರ್ವ ಜನರ ಬದುಕಿನಲ್ಲಿ ಹೊಸ ಆಶಾಕಿರಣ ಮೂಡಲಿ ಎಂದು ಹಾರೈಸಿ, ದಾವಣಗೆರೆ ಮತ್ತು ಜಗಳೂರು ತಾಲೂಕಿನ ಸಮಸ್ತ ಜನತೆಗೆ ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳನ್ನು ಕೋರಿದರು.

ಶ್ರೀ ಸದ್ಗುರು ಡ್ರೀಮ್ ಪ್ರಾಪರ್ಟೀಸ್ ನೂತನ ಕಚೇರಿ ಉದ್ಘಾಟನೆ: ಮಾಜಿ ಶಾಸಕ ಎಸ್.ವಿ. ರಾಮಚಂದ್ರ

“ಮುಂಜಾನೆಯ ಮೆರಗು”

ಜಗಳೂರು ನ, 09– ನಗರದ ಎಸ್.ಎಸ್. ಲೇಔಟ್ ರಿಂಗ್ ರಸ್ತೆಯಲ್ಲಿ ಲಿಂಗಾನಂದ ಕಮ್ಮತ್ತಳ್ಳಿ ಅವರ ಒಡೆತನದ ಶ್ರೀ ಸದ್ಗುರು ಡ್ರೀಮ್ ಪ್ರಾಪರ್ಟೀಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ನೂತನ ಕಚೇರಿಯ ಉದ್ಘಾಟನೆ ಹಾಗೂ ದೀಪಾವಳಿ ಹಬ್ಬದ ಪ್ರಯುಕ್ತ ಆಯೋಜಿಸಿದ್ದ ವಿಶೇಷ ಪೂಜಾ ಸಮಾರಂಭವು ಸಂಭ್ರಮದಿಂದ ನೆರವೇರಿತು.



ಈ ಶುಭ ಸಮಾರಂಭದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರಾದ ಎಸ್.ವಿ. ರಾಮಚಂದ್ರ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ನೂತನ ಕಚೇರಿಯನ್ನು ಉದ್ಘಾಟಿಸಿ ಸಂಸ್ಥೆಯ ಮುಂದಿನ ಯಶಸ್ಸು ಮತ್ತು ಪ್ರಗತಿಗೆ ಶುಭ ಹಾರೈಸಿದರು.

ವ್ಯವಹಾರ ಕ್ಷೇತ್ರದಲ್ಲಿ ಹೊಸ ಆಶಯ, ಕನಸು ಹಾಗೂ ಗುರಿಗಳೊಂದಿಗೆ ಆರಂಭಿಸಿರುವ ಸಂಸ್ಥೆಯು ಗ್ರಾಹಕರ ವಿಶ್ವಾಸ ಗಳಿಸಿ, ಉತ್ತಮ ಸೇವೆಯ ಮೂಲಕ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ. ಸಂಸ್ಥೆಯ ಉದ್ಯಮ ಚಟುವಟಿಕೆಗಳು ಯಶಸ್ಸಿನ ಹಾದಿಯಲ್ಲಿ ಸಾಗಲಿ ಎಂದು ಅವರು ಹಾರೈಸಿದರು.

ಇದೇ ಸಂದರ್ಭದಲ್ಲಿ ಹರಪನಹಳ್ಳಿ ತಾಲ್ಲೂಕಿನ ಕಮ್ಮತ್ತಳ್ಳಿ ವಿರಕ್ತಮಠದ ಪೂಜ್ಯ ಡಾ. ಶ್ರೀ ಗುರುಬಸವ ಮಹಾಸ್ವಾಮಿಗಳನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ಪೂಜ್ಯರು ತಮ್ಮ ಆಶೀರ್ವಚನದ ಮೂಲಕ ಸಂಸ್ಥೆಯ ಮಾಲೀಕರಿಗೆ ಹಾಗೂ ಕುಟುಂಬದ ಸದಸ್ಯರಿಗೆ ಶುಭ ಹಾರೈಸಿದರು.

ದೀಪಾವಳಿ ಹಬ್ಬದ ಧಾರ್ಮಿಕ ಸಂಭ್ರಮದೊಂದಿಗೆ ನಡೆದ ಈ ಕಾರ್ಯಕ್ರಮದಲ್ಲಿ ಕುಟುಂಬದ ಸದಸ್ಯರು, ಆತ್ಮೀಯರು, ಸಂಸ್ಥೆಯ ಸಿಬ್ಬಂದಿ ವರ್ಗದವರು, ಬಿಜೆಪಿ ಪಕ್ಷದ ಕಾರ್ಯಕರ್ತರು, ಮುಖಂಡರು ಹಾಗೂ ಹಲವು ಗಣ್ಯರು ಉಪಸ್ಥಿತರಿದ್ದು ಸಮಾರಂಭಕ್ಕೆ ಮೆರುಗು ನೀಡಿದರು.

ಭರಮಸಮುದ್ರ ಕೆರೆಯ ಮಣ್ಣು ಸಾಗಣೆ ತಕ್ಷಣ ನಿಲ್ಲಿಸಿ ಅಧಿಕಾರಿಗಳ ಮೌನಕ್ಕೆ ರೈತ ಸಂಘದ ಆಕ್ರೋಶ

“ಮುಂಜಾನೆಯ ಮೆರಗು”

ಜಗಳೂರು ನ, 09– ತಾಲ್ಲೂಕಿನ ಭರಮಸಮುದ್ರ ಕೆರೆಯಲ್ಲಿ ಇಟಾಚಿ ಯಂತ್ರಗಳ ಮೂಲಕ ಮಣ್ಣನ್ನು ಅಗೆದು ಟಿಪ್ಪರ್ ಲಾರಿಗಳಲ್ಲಿ ಅಪಾರ ಪ್ರಮಾಣದಲ್ಲಿ ಬೇರೆಡೆಗೆ ಸಾಗಿಸಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದ್ದು, ಈ ಅಕ್ರಮ ಮಣ್ಣು ಸಾಗಣೆಯನ್ನು ತಕ್ಷಣ ತಡೆಗಟ್ಟುವಂತೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ (ವಾಸುದೇವ ಮೇಟಿ ಬಣ) ಒತ್ತಾಯಿಸಿದೆ.





ಕೆರೆಯ ಮಣ್ಣನ್ನು ನಿರಂತರವಾಗಿ ಸಾಗಿಸಲಾಗುತ್ತಿದ್ದರೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೆ ಮೌನ ವಹಿಸಿರುವುದು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಸಾರ್ವಜನಿಕರ ಆಸ್ತಿಯಾಗಿರುವ ಕೆರೆಯ ಸಂರಕ್ಷಣೆಯ ಜವಾಬ್ದಾರಿ ಹೊಂದಿರುವ ಅಧಿಕಾರಿಗಳು ಈ ಬಗ್ಗೆ ನಿರ್ಲಕ್ಷ್ಯ ತೋರುತ್ತಿರುವುದು ಸರಿಯಲ್ಲ ಎಂದು ಸಂಘಟನೆಯ ತಾಲ್ಲೂಕು ಅಧ್ಯಕ್ಷ ಕುಮಾರ ಬಿ. ಭರಮಸಮುದ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಭರಮಸಮುದ್ರ ಕೆರೆಯು ಸುತ್ತಮುತ್ತಲಿನ ಗ್ರಾಮಗಳ ರೈತರು, ಗ್ರಾಮಸ್ಥರು ಹಾಗೂ ಜಾನುವಾರುಗಳಿಗೆ ಪ್ರಮುಖ ಜಲಮೂಲವಾಗಿದೆ. ಕೆರೆಯ ನೀರಿನಿಂದ ಅಂತರ್ಜಲ ಮಟ್ಟ ವೃದ್ಧಿಯಾಗುವುದರ ಜೊತೆಗೆ ಕೃಷಿ ಚಟುವಟಿಕೆಗಳಿಗೂ ಅನುಕೂಲವಾಗುತ್ತದೆ. ಇಂತಹ ಮಹತ್ವದ ಕೆರೆಯ ಮಣ್ಣನ್ನು ನಿಯಮಬಾಹಿರವಾಗಿ ಸಾಗಿಸುವುದರಿಂದ ಕೆರೆಯ ಸ್ವರೂಪ ಹಾಗೂ ಜಲಮೂಲಗಳಿಗೆ ಹಾನಿಯಾಗುವ ಆತಂಕವಿದೆ ಎಂದು ತಿಳಿಸಿದ್ದಾರೆ.

ಗಣಿ ಮತ್ತು ಭೂವಿಜ್ಞಾನ ಇಲಾಖೆ, ಕಂದಾಯ ಇಲಾಖೆ ಹಾಗೂ ಸ್ಥಳೀಯ ಆಡಳಿತದ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಮಣ್ಣು ಸಾಗಣೆಗೆ ಕಾನೂನುಬದ್ಧ ಅನುಮತಿ ಪಡೆದಿದ್ದಾರೆಯೇ ಎಂಬುದನ್ನು ಪರಿಶೀಲಿಸಿ, ಅನುಮತಿ ಇಲ್ಲದೆ ಸಾಗಣೆ ಮಾಡುತ್ತಿದ್ದರೆ ಸಂಬಂಧಪಟ್ಟ ವಾಹನಗಳನ್ನು ತಡೆದು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಕೆರೆಯ ಮಣ್ಣು ಸಾಗಣೆಯನ್ನು ತಕ್ಷಣ ನಿಲ್ಲಿಸದಿದ್ದರೆ ರೈತರು ಹಾಗೂ ಗ್ರಾಮಸ್ಥರನ್ನು ಒಗ್ಗೂಡಿಸಿ ಸಂಬಂಧಪಟ್ಟ ಇಲಾಖೆಗಳ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಜಗಳೂರು ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ಸಂಭ್ರಮದ ಲಕ್ಷ್ಮಿ ಪೂಜೆ

ವ್ಯಾಪಾರ ಮಳಿಗೆಗಳು, ಮನೆಗಳಲ್ಲಿ ವಿಶೇಷ ಪೂಜೆ; ದೀಪಾಲಂಕಾರ, ಪಟಾಕಿ ಸಿಡಿಸಿ ಹಬ್ಬದ ಸಂಭ್ರಮ

“ಮುಂಜಾನೆಯ ಮೆರಗು”

ಜಗಳೂರು ನ, 09– ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ವರ್ತಕರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ದೀಪಾವಳಿ ಹಬ್ಬದ ಅಂಗವಾಗಿ ಲಕ್ಷ್ಮಿ ಪೂಜೆಯನ್ನು ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ಆಚರಿಸಿದರು.

ದೀಪಾವಳಿ ಹಬ್ಬದ ಪ್ರಮುಖ ಆಚರಣೆಗಳಲ್ಲಿ ಒಂದಾದ ಲಕ್ಷ್ಮಿ ಪೂಜೆಯ ಹಿನ್ನೆಲೆಯಲ್ಲಿ ಪಟ್ಟಣದ ಬಟ್ಟೆ ಅಂಗಡಿಗಳು, ತರಕಾರಿ ಮಳಿಗೆಗಳು, ಕಿರಾಣಿ ಅಂಗಡಿಗಳು, ಚಿನ್ನಾಭರಣ ಮಳಿಗೆಗಳು ಸೇರಿದಂತೆ ವಿವಿಧ ವ್ಯಾಪಾರ ಮಳಿಗೆಗಳಲ್ಲಿ ವಿಶೇಷ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ವ್ಯಾಪಾರಸ್ಥರು ತಮ್ಮ ಅಂಗಡಿಗಳನ್ನು ಹೂವು, ಮಾವಿನ ತೋರಣ ಹಾಗೂ ವಿದ್ಯುತ್ ದೀಪಗಳಿಂದ ಅಲಂಕರಿಸಿ, ಲಕ್ಷ್ಮಿ ದೇವಿಯ ಪ್ರತಿಷ್ಠಾಪನೆ ಮಾಡಿ ವಿಶೇಷ ಪೂಜೆ ಸಲ್ಲಿಸಿದರು.

ಅದೇ ರೀತಿ ಸಾರ್ವಜನಿಕರು ತಮ್ಮ ಮನೆಗಳಲ್ಲಿ ಲಕ್ಷ್ಮಿ ದೇವಿಯ ಮೂರ್ತಿ ಹಾಗೂ ಭಾವಚಿತ್ರವನ್ನು ಪ್ರತಿಷ್ಠಾಪಿಸಿ, ಹೂವು, ಹಣ್ಣು, ಕಾಯಿ, ವಿವಿಧ ಸಿಹಿ



ತಿನಿಸುಗಳನ್ನು ನೈವೇದ್ಯವಾಗಿ ಅರ್ಪಿಸಿ ಕುಟುಂಬದ ಸದಸ್ಯರೊಂದಿಗೆ ಭಕ್ತಿಯಿಂದ ಪೂಜೆ ನೆರವೇರಿಸಿದರು. ಕುಟುಂಬದ ಸುಖ, ಶಾಂತಿ, ನೆಮ್ಮದಿ ಹಾಗೂ ವ್ಯಾಪಾರ–ವಹಿವಾಟಿನಲ್ಲಿ ಉತ್ತಮ ಪ್ರಗತಿ ಹೊಂದುವಂತೆ ಲಕ್ಷ್ಮಿ ದೇವಿ

ಬಾಲಕಿಯರ ವಸತಿ ನಿಲಯದಲ್ಲಿ ಅವ್ಯವಸ್ಥೆ: 15 ದಿನಗಳಲ್ಲಿ ಸಮಸ್ಯೆ ಬಗೆಹರಿಸಲು ಡಾ. ನಾಗಲಕ್ಷ್ಮೀ ಚೌಧರಿ ಸೂಚನೆ

"ಮುಂಜಾನೆಯ ಮೆರಗು"

ವಿಜಯನಗರ ನ, 09– ಕನ್ನಡ ವಿಶ್ವವಿದ್ಯಾಲಯದ ಹಿಂದುಳಿದ ವರ್ಗಗಳ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಬಾಲಕಿಯರ ವಸತಿ ನಿಲಯದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಸೇರಿದಂತೆ ಹಲವು ಗಂಭೀರ ಸಮಸ್ಯೆಗಳು ಕಂಡುಬಂದಿದ್ದು, ಇವುಗಳನ್ನು 15 ದಿನಗಳೊಳಗೆ ಪರಿಹರಿಸಿ ವರದಿ ಸಲ್ಲಿಸುವಂತೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.



ವಿಜಯನಗರ ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ವಸತಿ ನಿಲಯಕ್ಕೆ ಭೇಟಿ ನೀಡಿದ ಅವರು, ವಿದ್ಯಾರ್ಥಿನಿಯರಿಗೆ ಕಲ್ಪಿಸಲಾಗಿರುವ ವಸತಿ ಸೌಲಭ್ಯಗಳು, ಆಹಾರ ವ್ಯವಸ್ಥೆ, ಕುಡಿಯುವ ನೀರು ಹಾಗೂ ಸ್ವಚ್ಛತೆಯ ಕುರಿತು ಖುದ್ದಾಗಿ ಪರಿಶೀಲನೆ ನಡೆಸಿದರು.

ಈ ವೇಳೆ ವಸತಿ ನಿಲಯದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ, ಕಳಪೆ ಗುಣಮಟ್ಟದ ಆಹಾರ, ಅಡುಗೆಗೆ ಕೊಳೆತ ತರಕಾರಿಗಳ ಬಳಕೆ, ಅಸ್ವಚ್ಛ ಅಡುಗೆಮನೆ ಹಾಗೂ ಕಲುಷಿತ ನೀರಿನ ಬಳಕೆ ಸೇರಿದಂತೆ ಹಲವು ಸಮಸ್ಯೆಗಳು ಬೆಳಕಿಗೆ ಬಂದವು. ಕೋತಿಗಳು ಸ್ನಾನ ಮಾಡುವ ನೀರನ್ನೇ ಅಡುಗೆಗೆ ಬಳಸುತ್ತಿರುವುದು ಪರಿಶೀಲನೆ ವೇಳೆ ಕಂಡುಬಂದಿದ್ದು, ಈ ಬಗ್ಗೆ ಅಧ್ಯಕ್ಷರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಶಿಕ್ಷಣ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕಾದ ವಿದ್ಯಾರ್ಥಿನಿಯರು ಇಂತಹ ಅವ್ಯವಸ್ಥೆಯ ನಡುವೆ ದಿನ ಕಳೆಯುತ್ತಿರುವುದು ಬೇಸರದ ಸಂಗತಿಯಾಗಿದೆ. ವಿದ್ಯಾರ್ಥಿನಿಯರ ಆರೋಗ್ಯ, ಸುರಕ್ಷತೆ ಹಾಗೂ ಖಾಸಗಿತನದ ವಿಚಾರದಲ್ಲಿ ಅಧಿಕಾರಿಗಳು ಯಾವುದೇ ನಿರ್ಲಕ್ಷ್ಯ ತೋರಬಾರದು ಎಂದು ಅವರು ಎಚ್ಚರಿಕೆ ನೀಡಿದರು.

ವಸತಿ ನಿಲಯದಲ್ಲಿರುವ ಎಲ್ಲಾ ಸಮಸ್ಯೆಗಳನ್ನು ತಕ್ಷಣ ಪರಿಹರಿಸಬೇಕು. ಆಹಾರದ ಗುಣಮಟ್ಟ, ಕುಡಿಯುವ ನೀರಿನ ಸುರಕ್ಷತೆ, ಅಡುಗೆಮನೆಯ ಸ್ವಚ್ಛತೆ ಹಾಗೂ ಮೂಲಸೌಕರ್ಯಗಳ ಸುಧಾರಣೆಗೆ ಆದ್ಯತೆ ನೀಡಬೇಕು. ಕೈಗೊಂಡ ಕ್ರಮಗಳ ಕುರಿತು 15 ದಿನಗಳೊಳಗೆ ಮಹಿಳಾ ಆಯೋಗಕ್ಕೆ ಸಮಗ್ರ ವರದಿ ಸಲ್ಲಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹೆಣ್ಣುಮಕ್ಕಳ ಹಕ್ಕು, ಆರೋಗ್ಯ ಮತ್ತು ಸುರಕ್ಷತೆಯ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಲು ಸಾಧ್ಯವಿಲ್ಲ. ವಿದ್ಯಾರ್ಥಿನಿಯರಿಗೆ ಸುರಕ್ಷಿತ ಹಾಗೂ ಉತ್ತಮ ವಾತಾವರಣ ಕಲ್ಪಿಸುವುದು ಸಂಬಂಧಪಟ್ಟ ಇಲಾಖೆಗಳ ಜವಾಬ್ದಾರಿಯಾಗಿದೆ ಎಂದು ಡಾ. ನಾಗಲಕ್ಷ್ಮೀ ಚೌಧರಿ ಸ್ಪಷ್ಟಪಡಿಸಿದರು.

ಭಾಲ್ಕಿ ತಾಲ್ಲೂಕಿನ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲಿಸಿದ ಸಚಿವ ಈಶ್ವರ ಖಂಡ್ರೆ

"ಮುಂಜಾನೆಯ ಮೆರಗು"



ಭಾಲ್ಕಿ ನ, 09– ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಲೋಕೋಪಯೋಗಿ ಇಲಾಖೆ (ಕಘಇ) ಕಚೇರಿಯಲ್ಲಿ ಸಚಿವ ಈಶ್ವರ ಖಂಡ್ರೆ ಅವರು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ತಾಲ್ಲೂಕಿನಲ್ಲಿ ಪ್ರಗತಿಯಲ್ಲಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಮಗ್ರ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ವಿವಿಧ ಕಾಮಗಾರಿಗಳ ಪ್ರಸ್ತುತ ಸ್ಥಿತಿ, ಬಿಡುಗಡೆಯಾದ ಅನುದಾನದ ಬಳಕೆ, ಕಾಮಗಾರಿಗಳ ಗುಣಮಟ್ಟ ಹಾಗೂ ವಿಳಂಬಕ್ಕೆ ಕಾರಣಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು. ಕಾಮಗಾರಿಗಳ ಅನುಷ್ಠಾನದಲ್ಲಿ ಯಾವುದೇ ನಿರ್ಲಕ್ಷ್ಯ ಅಥವಾ ಲೋಪಗಳಿಗೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜನರ ಅಗತ್ಯತೆಗಳಿಗೆ ಮೊದಲ ಆದ್ಯತೆ ನೀಡಬೇಕು. ಅಭಿವೃದ್ಧಿ ಕಾರ್ಯಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವ ಜವಾಬ್ದಾರಿಯನ್ನು ಅಧಿಕಾರಿಗಳು ವಹಿಸಿಕೊಳ್ಳಬೇಕು ಎಂದು ಸಚಿವ ಈಶ್ವರ ಖಂಡ್ರೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಹೆಗ್ಗೆರೆ ಹೊಸ ಬಡಾವಣೆಯ ರಸ್ತೆ ಅಭಿವೃದ್ಧಿಗೆ ಕ್ರಮ: ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ

"ಮುಂಜಾನೆಯ ಮೆರಗು"



ತುಮಕೂರು ನ, 09– ತಾಲ್ಲೂಕಿನ ಹೆಗ್ಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸ ಬಡಾವಣೆಯಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ಗ್ರಾಮಸ್ಥರು ಸಲ್ಲಿಸಿದ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಸ್ಥಳಕ್ಕೆ ಭೇಟಿ ನೀಡಿ ರಸ್ತೆ ಕಾಮಗಾರಿಯ ಸ್ಥಿತಿಗತಿಗಳನ್ನು ಪರಿಶೀಲಿಸಿದರು.

2025–26ನೇ ಸಾಲಿನ 5054 ಯೋಜನೆಯಡಿ ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಹೆಗ್ಗೆರೆ ಗ್ರಾಮದಲ್ಲಿ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ಕಾರ್ಯಕ್ರಮದಡಿ ರಸ್ತೆ ಅಭಿವೃದ್ಧಿಗೆ ಅನುದಾನ ಮಂಜೂರಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು.

ಹೆಗ್ಗೆರೆ ಗ್ರಾಮದ ಹೊಸ ಬಡಾವಣೆಯ ಈ ರಸ್ತೆ ಗಾನಾ ಲೇಔಟ್‌ಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯಾಗಿದೆ. ಪ್ರತಿದಿನ ಸುಮಾರು 10ರಿಂದ 15 ಶಾಲಾ ವಾಹನಗಳು ಈ ಮಾರ್ಗದಲ್ಲಿ ಸಂಚರಿಸುತ್ತವೆ. ಆದರೆ ಮಳೆಗಾಲದಲ್ಲಿ ರಸ್ತೆ ಕೆಸರುಮಯವಾಗುವುದರಿಂದ ಶಾಲಾ ಮಕ್ಕಳನ್ನು ವಾಹನಗಳಿಗೆ ಹತ್ತಿಸುವುದು ಹಾಗೂ ಸಾರ್ವಜನಿಕರು ಸಂಚರಿಸುವುದು ಕಷ್ಟಕರವಾಗಿದೆ ಎಂದು ಗ್ರಾಮಸ್ಥರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಗ್ರಾಮಸ್ಥರ ಮನವಿಯನ್ನು ಆಲಿಸಿದ ಜಿಲ್ಲಾಧಿಕಾರಿಗಳು ರಸ್ತೆ ಕಾಮಗಾರಿಯ ಪ್ರಸ್ತುತ ಸ್ಥಿತಿಗತಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ಕೆಆರ್‌ಐಡಿಎಲ್ (ಏಖಐಆಐ) ಅಧಿಕಾರಿಗಳು ಸದರಿ ಕಾಮಗಾರಿಯು ಯಾವುದೇ ಯೋಜನೆಯಡಿ ಸೇರ್ಪಡೆಯಾಗಿಲ್ಲ ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರು ಹಾಗೂ ಶಾಲಾ ಮಕ್ಕಳ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವುದು ಅಗತ್ಯವಾಗಿದ್ದು, ನಿಯಮಾನುಸಾರ ಇತರೆ ಯೋಜನೆಗಳಲ್ಲಿನ ಉಳಿತಾಯ ಅನುದಾನವನ್ನು ಬಳಸಿಕೊಂಡು ರಸ್ತೆ ಕಾಮಗಾರಿ ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಹಾಗೂ ಕೆಆರ್‌ಐಡಿಎಲ್ ಇಲಾಖೆಯ ತಾಂತ್ರಿಕ ಅಧಿಕಾರಿಗಳು ಉಪಸ್ಥಿತರಿದ್ದರು.

ಹೆಬ್ಬಾಳ–ಮೇಖ್ರಿ ವೃತ್ತ ಎಲಿವೇಟೆಡ್ ರಸ್ತೆ ಕಾಮಗಾರಿ ಪರಿಶೀಲಿಸಿದ ಡಿ.ಕೆ. ಶಿವಕುಮಾರ್

"ಮುಂಜಾನೆಯ ಮೆರಗು"



ಬೆಂಗಳೂರು ನ, 09– ನಗರದ ಸಂಚಾರ ದಟ್ಟಣೆ ನಿವಾರಣೆ ಹಾಗೂ ಸುಗಮ ವಾಹನ ಸಂಚಾರಕ್ಕೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿರುವ ಹೆಬ್ಬಾಳ ಜಂಕ್ಷನ್‌ನಿಂದ ಮೇಖ್ರಿ ವೃತ್ತದವರೆಗಿನ ಎಲಿವೇಟೆಡ್ ರಸ್ತೆ ಕಾಮಗಾರಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಯೋಜನೆಯ ಪ್ರಸ್ತುತ ಪ್ರಗತಿ, ಕಾಮಗಾರಿಯ ಸ್ವರೂಪ ಹಾಗೂ ಅನುಷ್ಠಾನದ ವಿವಿಧ ಹಂತಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಕಾಮಗಾರಿಯನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಕಾಮಗಾರಿಯ ಅನುಷ್ಠಾನದಲ್ಲಿ ವಿಳಂಬವಾಗದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಬೆಂಗಳೂರು ನಗರದ ಪ್ರಮುಖ ಸಂಪರ್ಕ ಮಾರ್ಗಗಳಲ್ಲಿ ಒಂದಾಗಿರುವ ಹೆಬ್ಬಾಳ ಜಂಕ್ಷನ್‌ನಿಂದ ಮೇಖ್ರಿ ವೃತ್ತದವರೆಗಿನ ಈ ರಸ್ತೆ ಅಭಿವೃದ್ಧಿಯಿಂದ ವಾಹನ ಸಂಚಾರ ವ್ಯವಸ್ಥೆಗೆ ಅನುಕೂಲವಾಗುವ ನಿರೀಕ್ಷೆಯಿದೆ.

ಈ ಸಂದರ್ಭದಲ್ಲಿ ಬಿಡಿಎ ಅಧ್ಯಕ್ಷರು ಹಾಗೂ ಶಾಸಕ ಎನ್.ಎ. ಹ್ಯಾರಿಸ್, ಸಚಿವ ಯು.ಟಿ. ಖಾದರ್, ಬಿಡಿಎ ಆಯುಕ್ತ ಪಿ. ಮಣಿವಣ್ಣನ್, ಬೆಂಗಳೂರು ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಅಳತೆಮೀರಿ ಎಥೆನಾಲ್ ಮಿಶ್ರಣದಿಂದ ವಾಹನಗಳ ಎಂಜಿನ್ ಹಾಳಾಗುತ್ತಿವೆ : ಸಚಿವ ರಿಜ್ವಾನ್ ಅರ್ಷದ್

"ಮುಂಜಾನೆಯ ಮೆರಗು"



ಬೆಂಗಳೂರು, ನ.09– ನಿಗದಿತ ಪ್ರಮಾಣ ಕ್ಕಿಂತಲೂ ಹೆಚ್ಚಿನದಾಗಿ ಎಥೆನಾಲ್ ಅನ್ನು ಪೆಟ್ರೋಲ್ ಮಿಶ್ರಣ ಮಾಡುತ್ತಿರುವುದರಿಂದಾಗಿ ವಾಹನಗಳ ಎಂಜಿನ್‌ಗಳು ಹಾಳಾಗುತ್ತಿವೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ರಿಜ್ವಾನ್ ಅರ್ಷದ್ ಆರೋಪಿಸಿದ್ದು, ಎಥೆನಾಲ್ ಮಿಶ್ರಿತ ಇಂಧನ ಖರೀದಿ ಗ್ರಾಹಕರ ಆಯ್ಕೆಯಾಗಿರ ಬೇಕೆಂದು ಒತ್ತಾಯಿಸಿದ್ದಾರೆ.

ಪತ್ರಿಕಾ ಸಂವಾದದಲ್ಲಿ ಮಾತನಾಡಿದ ಅವರು, ಪೆಟ್ರೋಲ್ ಬಂಕ್‌ಗಳಲ್ಲಿ ಸಂಗ್ರಹಿಸಲಾದ ಮಾದರಿಗಳ ಫಲಿತಾಂಶ ವರದಿಗಳ ಕುರಿತು ಈ ಹಿಂದೆ ತಾವು ನೀಡಿದ ಹೇಳಿಕೆಗೆ ಬದ್ಧರಾಗಿರುವುದಾಗಿ ಪುನರುಚ್ಚರಿಸಿದರು.

ರಾಜ್ಯದಲ್ಲಿ 63 ಕಡೆಗಳಲ್ಲಿ ಮಾದರಿಗಳನ್ನು ಸಂಗ್ರಹಿಸಿ, ಅದರಲ್ಲಿ ಒಂದನ್ನು ಆ ತೈಲ ಕಂಪನಿಗಳ ಪ್ರಯೋಗಾಲಯಕ್ಕೆ ರವಾನಿಸಲಾಗಿತ್ತು. ಮತ್ತೊಂದನ್ನು ಪೆಟ್ರೋಲ್ ಬಂಕ್ಗಳ ಮಾಲೀಕರಿಗೆ ನೀಡಲಾಗಿದ್ದು, ಮೂರನೇ ಮಾದರಿಯನ್ನು ಪರೀಕ್ಷೆಗಾಗಿ ಖಾಸಗಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು ಎಂದು ಹೇಳಿದ್ದಾರೆ.

ರಾಜ್ಯ ಸರ್ಕಾರ ಖಾಸಗಿ ಲ್ಯಾಬ್‌ನಿಂದ ಪಡೆದುಕೊಂಡ ವರದಿಯ ಪ್ರಕಾರ ಎಥೆನಾಲ್ನ ಮಿಶ್ರಣ ಶೇ. 21 ರಿಂದ 31ರವರೆಗೂ ಇದೆ. ಇದು ಕೇಂದ್ರ ಸರ್ಕಾರ ನಿರ್ಧರಿಸಿದ ಶೇ. 20ರ ಮಿತಿಯನ್ನು ದಾಟಿದೆ. ಆದರೆ ನಮ ವರದಿ ವೈಜ್ಞಾನಿಕವಲ್ಲ ಎಂಬ ಆಕ್ಷೇಪಣೆಗಳನ್ನು ತೈಲ ಕಂಪನಿಗಳು ಎತ್ತಿವೆ. ರಾಜ್ಯ ಸರ್ಕಾರ ನಿಯಮಾವಳಿಗಳ ಅನುಸಾರ ಬಂಕ್‌ಗಳು ಮತ್ತು ತೈಲ ಕಂಪನಿಗಳ ಪ್ರತಿನಿಧಿಗಳ ಸಮುಖದಲ್ಲೇ ಮಾದರಿ ಸಂಗ್ರಹಿಸಿದೆ. ಈ ಸಂದರ್ಭದಲ್ಲಿ ಎಲ್ಲಾ ಅಧಿಕಾರಿಗಳು ತಮ ಸಹಿ ಹಾಕಿದ್ದಾರೆ.

ತೈಲ ಕಂಪನಿಗಳಿಗೆ ಕಳುಹಿಸಲಾದ ಮಾದರಿಗಳ ಫಲಿತಾಂಶವನ್ನು ನಮಗೆ ನೀಡಲಾಗಿಲ್ಲ. ಪರ್ಯಾಯವಾಗಿ ರಾಜ್ಯ ಸರ್ಕಾರ ನ್ಯಾಷನಲ್ ಅಕಾಡೇಷನ್ ಬೋರ್ಡ್ ಆಫ್ ಟೆಸ್ಟಿಂಗ್ ಆ್ಯಂಡ್ ಲ್ಯಾಬೊರೇಟರಿ (ಎನ್‌ಎಬಿಎಲ್)ಯಿಂದ ಮಾನ್ಯತೆ ಪಡೆದ ಖಾಸಗಿ ಪ್ರಯೋಗಾಲಯಗಳಿಗೆ ಮಾದರಿ ಕಳುಹಿಸಿ ವರದಿ ಪಡೆದುಕೊಂಡಿದ್ದೇವೆ.

ಎಥೆನಾಲ್ ಮಿಶ್ರಣ ಪತ್ತೆ ಹಚ್ಚಲು ಸಾಮಾನ್ಯ ಜ್ಞಾನ ಸಾಲುವುದಿಲ್ಲ. ಅದೊಂದು ರಾಕೆಟ್ ಸೈನ್ಸ್. ನಿಮಿಂದ ಸಾಧ್ಯವಿಲ್ಲ ಎಂದು ಹೇಳುತ್ತಿರುವ ತೈಲ ಕಂಪನಿಗಳು, ನಮ ವರದಿ ಪ್ರಕಟಗೊಂಡ ಬಳಿಕ ಆನ್‌ಲೈನ್‌ನಲ್ಲಿ ಸಿಗುವ 600 ರೂ. ಬೆಲೆಯ ಹೈಡ್ರೋ ಮೀಟರ್ ಅನ್ನು ಬಳಸಿ ಕೆಲವು ಬಂಕ್‌ಗಳಲ್ಲಿ ಸ್ಥಳದಲ್ಲೇ ತಪಾಸಣೆ ನಡೆಸುತ್ತಿದ್ದು, ಎಥೆನಾಲ್ ಮಿಶ್ರಣ ಎಷ್ಟು ಎಂದು ಘೋಷಣೆ ಮಾಡುತ್ತಿವೆ. ತೈಲ ಕಂಪನಿಗಳ ಪರವಾಗಿ ಬಂಕ್ ಮಾಲೀಕರಿಂದಲೂ ಹೇಳಿಕೆ ಕೊಡಿಸಲಾಗುತ್ತಿದೆ ಎಂದು ದೂರಿದರು.

ನಮ ಮಾದರಿಯ ಪರೀಕ್ಷಾ ವರದಿ ಸರಿಯಿಲ್ಲ ಎಂದು ಹೇಳುವ ತೈಲ ಕಂಪನಿಗಳು ಸಾಮಾನ್ಯ ಮಾಪನದ ಮೂಲಕವೇ ಫಲಿತಾಂಶ ಘೋಷಿಸುವಂತಹ ದ್ವಂದ್ವ ಅನುಸರಿಸುತ್ತಿವೆ. ಎಷ್ಟು ಪ್ರಮಾಣದಲ್ಲಿ ಎಥೆನಾಲ್ ಮಿಶ್ರಣವಾಗುತ್ತಿದೆ ಎಂಬುದನ್ನಾದರೂ ಅಧಿಕೃತವಾಗಿ ಘೋಷಿಸಲು ಹಿಂದೇಟು ಹಾಕುತ್ತಿವೆ ಎಂದು ಟೀಕಿಸಿದರು.

ಎಥೆನಾಲ್ ಮಿಶ್ರಣ ಸಾಮಾನ್ಯ ಕಲಬೆರೆಕೆ ಪ್ರಕರಣ ಎಂದು ಪರಿಗಣಿಸಲಾಗುವುದಿಲ್ಲ. ಪೆಟ್ರೋಲ್ ಬಂಕ್ ಮಾಲೀಕರು ಎಥೆನಾಲ್ ಅನ್ನು ಸ್ಥಳೀಯವಾಗಿ ಮಿಶ್ರಣ ಮಾಡಲಾಗುವುದಿಲ್ಲ. ರಾಜ್ಯದಲ್ಲಿ 6 ಕಡೆ ಇಂಧನ ಪೂರೈಸುವ ಅಧಿಕೃತವಾದ ಟರ್ಮಿನಲ್‌ಗಳಿದ್ದು, ಅವು ತೈಲ ಕಂಪನಿಗಳ ಹಿಡಿತಲ್ಲಿದೆ. ಅಲ್ಲಿಂದಲೇ ಎಥೆನಾಲ್ ಮಿಶ್ರಣವಾಗುತ್ತಿದೆ. ಇದ–ಕ್ಕೆ ಕೇಂದ್ರ ಸರ್ಕಾರವೇ ಹೊಣೆ ಎಂದು ಆರೋಪಿಸಿದರು.

ಮಾಜಿ ಸಿಎಂ ಸಿದ್ದರಾಮಯ್ಯನವರನ್ನು ಭೇಟಿಯಾಗಿ ದೀಪಾವಳಿ ಶುಭಾಷಯ ತಿಳಿಸಿದ ಡಿಕೆಶಿ



"ಮುಂಜಾನೆಯ ಮೆರಗು"

ಬೆಂಗಳೂರು, ನ.09– ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ದೀಪಾವಳಿ ಶುಭಾಷಯ ತಿಳಿಸಿದ್ದಾರೆ. ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿರುವ ಅವರು, ಈ ಸಂದರ್ಭದಲ್ಲಿ ರಾಜ್ಯ ರಾಜಕೀಯ ಬೆಳವಣಿಗೆಗಳ ಬಗ್ಗೆ ಕೂಡ ಚರ್ಚೆ ನಡೆಸಿದ್ದಾರೆ.

ದೀಪಾವಳಿ ಹಬ್ಬದ ಸಂದರ್ಭಕ್ಕೆ ನಿಗಮ ಮಂಡಳಿಗಳ ನೇಮಕಾತಿ ಕೈಗೊಳ್ಳುವುದಾಗಿ ರಾಜ್ಯ ಸರ್ಕಾರ ಭರವಸೆ ನೀಡಿತ್ತು. ಆದರೆ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರ ಪಟ್ಟಿಗಳು ಪ್ರತ್ಯೇಕವಾಗಿದ್ದರಿಂದಾಗಿ ನೇಮಕಾತಿಗಳು ನೆನೆಗುದಿಗೆ ಬಿದ್ದಿವೆ. ಇಂದಿನ ಭೇಟಿಯಲ್ಲಿ ಆ ಕುರಿತು ಚರ್ಚೆ ನಡೆದಿದೆ ಎನ್ನಲಾಗಿದೆ.

ವಿಧಾನ ಪರಿಷತ್ತಿನ 5 ಸ್ಥಾನಗಳಿಗೆ ನಾಮ ನಿರ್ದೇಶನ ಮಾಡುವ ಕುರಿತಂತೆ–ಯೂ ಡಿ.ಕೆ.ಶಿವಕುಮಾರ್ ಮಾಹಿತಿ ವಿನಿಮಯ ಮಾಡಿಕೊಂಡಿದ್ದಾರೆ. ಸ್ಟಿಂಗ್ ಆಪರೇಷನ್ ವಿವಾದ ತೀವ್ರಗೊಂಡ ಬಳಿಕ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಮೈಸೂರಿನಲ್ಲಿ ಒಮೆ ಭೇಟಿಯಾಗಿದ್ದನ್ನು ಹೊರತು ಪಡಿಸಿದರೆ ಪರಸ್ಪರ ಎಲ್ಲಿಯೂ ಸಂಧಿಸಿರಲಿಲ್ಲ.

ದೀಪಾವಳಿಯ ಹಬ್ಬದ ಸಂದರ್ಭದಲ್ಲಿ ಶುಭಾಷಯ ವಿನಿಮಯ ಮಾಡಿಕೊಳ್ಳುವ ನೆಪದಲ್ಲಿ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಚರ್ಚೆ ಮಾಡಿದ್ದಾರೆ. ಇತ್ತೀಚೆಗೆ ರಾಜ್ಯ ರಾಜಕಾರಣದಲ್ಲಿ ಹಲವಾರು ಮಹತ್ವದ ವಿಚಾರಗಳು ಮುನ್ನೆಲೆಗೆ ಬಂದಿವೆ. ಅವುಗಳ ಬಗ್ಗೆ ಇಬ್ಬರೂ ನಾಯಕರು ಔಪಚಾರಿಕ ಚರ್ಚೆ ನಡೆಸಿದ್ದಾರೆ ಎಂದು ಹೇಳಲಾಗುತ್ತಿದೆ.

ತುಮಕೂರಿನಲ್ಲಿ ನವೆಂಬರ್ 28 ಮತ್ತು 29ರಂದು ರಾಜ್ಯ ಮಟ್ಟದ ಯುವಜನೋತ್ಸವ 31 ಜಿಲ್ಲೆಗಳ 1,023 ಯುವ ಪ್ರತಿಭೆಗಳು ಭಾಗಿ; ರಾಷ್ಟ್ರಮಟ್ಟಕ್ಕೆ 33 ಸ್ಪರ್ಧಿಗಳ ಆಯ್ಕೆ

"ಮುಂಜಾನೆಯ ಮೆರಗು"



ತುಮಕೂರು ನ, 09– ಸ್

ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಚುನಾವಣೆಗೆ ಆಯೋಗ ಸಿದ್ಧತೆ

"ಮುಂಜಾನೆಯ ಮೆರಗು"

ಬೆಂಗಳೂರು,ನ.9– ಕರ್ನಾಟಕದಲ್ಲಿ 2027ರ ಜನವರಿಯಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಸುವ ಸಾಧ್ಯತೆ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯೋಗ ಚುನಾವಣಾ ಸಿದ್ಧತೆಗಳನ್ನು ಚುರುಕುಗೊಳಿಸಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಗಳಿಗೆ ಚುನಾವಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಆರಂಭಿಸುವಂತೆ ಆಯೋಗ ನಿರ್ದೇಶನ ನೀಡಿದೆ. ರಾಜ್ಯ ಚುನಾವಣಾ ಆಯೋಗ ಶನಿವಾರ ಹೊರಡಿಸಿರುವ ನಿರ್ದೇಶನದಂತೆ, ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಸಹಾಯಕ ಆಯುಕ್ತರ ಹುದ್ದೆಯ ಅಥವಾ ಅದ–ಕ್ಕೆ ಸಮಾನ ಶ್ರೇಣಿಯ ಅಧಿಕಾರಿಗಳನ್ನು ಚುನಾವಣಾಧಿಕಾರಿಗಳಾಗಿ ನೇಮಿಸಬೇಕು. ತಾಲೂಕು ಪಂಚಾಯಿತಿ ಕ್ಷೇತ್ರಗಳಿಗೆ ತಹಸೀಲ್ದಾರ್ ಅಥವಾ ಸಮಾನ ಶ್ರೇಣಿಯ ಅಧಿಕಾರಿಗಳನ್ನು ಚುನಾವಣಾಧಿಕಾರಿಗಳಾಗಿ ನೇಮಿಸಲು ಸೂಚಿಸಲಾಗಿದೆ.

ನವೆಂಬರ್ 16ರೊಳಗೆ ಪಟ್ಟಿ ಸಲ್ಲಿಕೆ

ಜಿಲ್ಲಾಧಿಕಾರಿಗಳು ಪ್ರಾಥಮಿಕ ಸಭೆಗಳನ್ನು ನಡೆಸಿ, ನೇಮಕಗೊಳ್ಳುವ ಚುನಾವಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳಿಗೆ ಅಗತ್ಯ ತರಬೇತಿ ನೀಡಬೇಕು. ನೇಮಕಾತಿಗೆ ಸಂಬಂಧಿಸಿದ ಪ್ರಸ್ತಾವನೆ ಹಾಗೂ ಆರ್ಓ–ಎಆರ್ಓ ಪಟ್ಟಿಯನ್ನು ನವೆಂಬರ್ 16ರೊಳಗೆ ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕು ಎಂದು ಸೂಚಿಸಲಾಗಿದೆ.ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಗಳ ನಡವಳಿಕೆ) ನಿಯಮಗಳು, 1993ರ ನಿಯಮ 6ರನ್ವಯ ಸೂಕ್ತ ಅಧಿಕಾರಿಗಳನ್ನು ಗುರುತಿಸಿ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಕ್ಷೇತ್ರಗಳ ಸಂಖ್ಯೆಗೆ ಅನುಗುಣವಾಗಿ ಅಧಿಕಾರಿಗಳ ನೇಮಕ

ಜಿಲ್ಲಾ ಪಂಚಾಯಿತಿ ಚುನಾವಣೆಗೆ ಪ್ರತಿ ತಾಲೂಕಿಗೆ ಒಬ್ಬ ಸಹಾಯಕ ಆಯುಕ್ತರ ಶ್ರೇಣಿಯ ಅಧಿಕಾರಿಯನ್ನು ಆರ್ಒಗಳನ್ನಾಗಿ ನೇಮಿಸಬೇಕು. 10ಕ್ಕಿಂತ ಹೆಚ್ಚು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿರುವ ತಾಲೂಕುಗಳಲ್ಲಿ ಅಗತ್ಯವಿದ್ದರೆ ಇಬ್ಬರು ಆರ್ಒಗಳನ್ನು ನೇಮಿಸಬಹುದಾಗಿದೆ. ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರ್ ಹೊರತುಪಡಿಸಿ, ತಹಸೀಲ್ದಾರ್ ಶ್ರೇಣಿಯ ಅಧಿಕಾರಿಗಳನ್ನು ಎಆರ್ಒಗಳಾಗಿ ನೇಮಿಸಲು ಸೂಚಿಸಲಾಗಿದೆ.



ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಪ್ರತಿ 15 ಕ್ಷೇತ್ರಗಳಿಗೆ ಒಬ್ಬ ತಹಸೀಲ್ದಾರ್ ಅಥವಾ ಸಮಾನ ಶ್ರೇಣಿಯ ಅಧಿಕಾರಿಯನ್ನು ಆರ್ಒಗಳಾಗಿ ನೇಮಿಸಬೇಕು. ಉಪ ತಹಸೀಲ್ದಾರ್ ಅಥವಾ ಸಮಾನ ಶ್ರೇಣಿಯ ಅಧಿಕಾರಿಗಳನ್ನು ಎಆರ್ಒಗಳಾಗಿ ನಿಯೋಜಿಸಬೇಕು.

ಅನುಭವ ಇರುವ ಸಿಬ್ಬಂದಿಗೆ ಆದ್ಯತೆ

ಚುನಾವಣಾ ಕಾರ್ಯಕ್ಕೆ ನಿಯೋಜಿಸುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಹಿಂದಿನ ಚುನಾವಣಾ ಅನುಭವ ಇರುವಂತೆ ನೋಡಿಕೊಳ್ಳಬೇಕು ಎಂದು ಆಯೋಗ ಸೂಚಿಸಿದೆ. ಚುನಾವಣಾ ಸಿದ್ಧತೆಯ ಆರಂಭದಿಂದ ಮತದಾನ ಮತ್ತು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ವಿವಿಧ ಹಂತಗಳಲ್ಲಿ ಕಾರ್ಯನಿರ್ವಹಿಸುವ ಎಲ್ಲ ಸಿಬ್ಬಂದಿಗೂ ತರಬೇತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ. ಅಲ್ಲದೆ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾದ ಅಧಿಕಾರಿಗಳನ್ನು ರಾಜ್ಯ ಚುನಾವಣಾ ಆಯೋಗದ ಪೂರ್ವಾನುಮತಿ ಇಲ್ಲದೆ ಬದಲಾಯಿಸಬಾರದು. ಅನಿವಾರ್ಯ ಸಂದರ್ಭದಲ್ಲಿ ಆಯೋಗದ ಅನುಮತಿ ಪಡೆದ ಬಳಿಕವೇ ಬದಲಾವಣೆ ಮಾಡಬೇಕು ಎಂದು ಸ್ಪಷ್ಟಪಡಿಸಲಾಗಿದೆ.

ಡಿಸೆಂಬರ್‌ನಲ್ಲಿ ವೇಳಾಪಟ್ಟಿ ಸಾಧ್ಯತೆ

ಇತ್ತೀಚೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಅವರು, ಜನವರಿಯಲ್ಲಿ ಚುನಾವಣೆ ನಡೆಸುವ ಉದ್ದೇಶವಿದ್ದರೆ ಡಿಸೆಂಬರ್ ಮಧ್ಯಭಾಗದಲ್ಲಿ ರಾಜ್ಯ ಚುನಾವಣಾ ಆಯೋಗ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸುವ ಸಾಧ್ಯತೆ ಇದೆ ಎಂದು ಸೂಚಿಸಿದ್ದರು.

ಇದೀಗ ಆರ್ಒ ಮತ್ತು ಎಆರ್ಒಗಳ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಆಯೋಗ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿರುವುದು ಚುನಾವಣಾ ಸಿದ್ಧತೆಗಳು ಮುಂದುವರಿದಿರುವುದಕ್ಕೆ ಮತ್ತಷ್ಟು ಸೂಚನೆಯಾಗಿದೆ.

ಮತಪೆಟ್ಟಿಗೆಗಳ ಸಿದ್ಧತೆ

ಮೂಲಗಳ ಪ್ರಕಾರ, ರಾಜ್ಯ ಚುನಾವಣಾ ಆಯೋಗ ರಾಜ್ಯಾದ್ಯಂತ ಲಭ್ಯವಿರುವ ಮತಪೆಟ್ಟಿಗೆಗಳ ಪರಿಶೀಲನೆ ಮತ್ತು ಆಡಿಟ್ ಪೂರ್ಣಗೊಳಿಸಿದೆ. ಸುಮಾರು 80 ಕೋಟಿಗೂ ಅಧಿಕ ಮೌಲ್ಯದ ಮತಪೆಟ್ಟಿಗೆಗಳು ಮರುಬಳಕೆಗೆ ಯೋಗ್ಯ ಸ್ಥಿತಿಯಲ್ಲಿವೆ ಎಂದು ತಿಳಿದುಬಂದಿದೆ. ಇದರ ಜೊತೆಗೆ, ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸಲು ಅಗತ್ಯವಿರುವ ಹೆಚ್ಚುವರಿ ಮತಪೆಟ್ಟಿಗೆಗಳು ಹಾಗೂ ಇತರ ಚುನಾವಣಾ ಸಾಮಗ್ರಿಗಳ ಖರೀದಿಗಾಗಿ ರಾಜ್ಯ ಸರ್ಕಾರ ಇತ್ತೀಚೆಗೆ ರಾಜ್ಯ ಚುನಾವಣಾ ಆಯೋಗಕ್ಕೆ 125 ಕೋಟಿ ಬಿಡುಗಡೆ ಮಾಡಿದೆ ಎನ್ನಲಾಗಿದೆ.

ಒಟ್ಟಿನಲ್ಲಿ, ಜನವರಿ 2027ರ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳ ನೇಮಕ, ತರಬೇತಿ, ಮತಪೆಟ್ಟಿಗೆಗಳ ಸಿದ್ಧತೆ ಹಾಗೂ ಚುನಾವಣಾ ಸಾಮಗ್ರಿಗಳ ವ್ಯವಸ್ಥೆ ಸೇರಿದಂತೆ ಹಲವು ಹಂತಗಳಲ್ಲಿ ರಾಜ್ಯ ಚುನಾವಣಾ ಆಯೋಗ ಸಿದ್ಧತೆ ಆರಂಭಿಸಿದೆ.

ವಿಕಸಿತ ಭಾರತ ಉದ್ಯೋಗ ಖಾತ್ರಿ ಯೋಜನೆ ಪ್ರಗತಿ ಪರಿಶೀಲನೆ ಸಭೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 09– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಅವರ ಅಧ್ಯಕ್ಷತೆಯಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಯಿತು.



ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಯೋಜನೆಯ ಅನುಷ್ಠಾನ ಹಾಗೂ ಪ್ರಗತಿಯ ಕುರಿತು ಮಾಹಿತಿ ಪಡೆದರು.

ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು, ಗ್ರಾಮೀಣ ಜನರ ಜೀವನೋಪಾಯವನ್ನು ಸುಧಾರಿಸುವುದು ಹಾಗೂ ಯೋಜನೆಯ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಆಯುಕ್ತರಾದ ವೈ.ಎಸ್. ಪಾಟೀಲ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

ಉರ್ದು ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ ಅಗತ್ಯ: ಪ್ರಶಸ್ತಿ ಪ್ರದಾನ ಮಾಡಿದ ಸಿಎಂ ಡಿ.ಕೆ. ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು ನ, 09– ಉರ್ದು ಭಾಷೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉತ್ತೇಜಿಸುವ ಉದ್ದೇಶದಿಂದ ಬೆಂಗಳೂರಿನ ಟೌನ್‌ಹಾಲ್‌ನಲ್ಲಿ ಆಯೋಜಿಸಿದ್ದ 2025ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಿದರು.



ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಹಾಗೂ ಕರ್ನಾಟಕ ಉರ್ದು ಅಕಾಡೆಮಿ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಉದ್ಘಾಟಿಸಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಗೌರವಿಸಿದರು. ಇದೇ ಸಂದರ್ಭದಲ್ಲಿ ಪುಸ್ತಕಗಳ ಬಿಡುಗಡೆ ಹಾಗೂ ಜಶ್ನ್–ಎ–ಉರ್ದು ಕಾರ್ಯಕ್ರಮವೂ ನಡೆಯಿತು.

ಉರ್ದು ಭಾಷೆಯ ಸಾಹಿತ್ಯಿಕ ಶ್ರೀಮಂತಿಕೆ, ಸಾಂಸ್ಕೃತಿಕ ಪರಂಪರೆ ಹಾಗೂ ಭಾಷೆಯ ಬೆಳವಣಿಗೆಗೆ ಕೊಡುಗೆ ನೀಡುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿತ್ತು.

ಕಾರ್ಯಕ್ರಮದಲ್ಲಿ ಸಚಿವ ಯು.ಟಿ. ಖಾದರ್, ರಿಜ್ವಾನ್ ಅರ್ಷದ್, ರಾಜ್ಯಸಭಾ ಸದಸ್ಯ ಮನ್ಸೂರ್ ಅಲಿ ಖಾನ್, ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್, ಶಾಸಕ ಯಾಸಿರ್ ಅಹ್ಮದ್ ಖಾನ್ ಪಠಾಣ್, ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹ್ಮದ್, ಉರ್ದು ಅಕಾಡೆಮಿ ಅಧ್ಯಕ್ಷ ಮೊಹಮ್ಮದ್ ಅಲಿ ಖಾಜಿ ಸೇರಿದಂತೆ ಹಲವು ಗಣ್ಯರು, ಸಾಹಿತಿಗಳು ಹಾಗೂ ಗಣ್ಯ ಅತಿಥಿಗಳು ಉಪಸ್ಥಿತರಿದ್ದರು.

ಸರಣಿ ಹತ್ಯೆ ಪ್ರಕರಣ : ಎಲ್ಲಾ ಏಳು ಮಂದಿಯ ಮೃತದೇಹಗಳನ್ನು ಪತ್ತೆ ಹಚ್ಚಿದ ಪೊಲೀಸರು

"ಮುಂಜಾನೆಯ ಮೆರಗು"

ಬೆಂಗಳೂರು, ನ. 09– ಬೆಂಗಳೂರಿನಲ್ಲಿ ಒಂದೇ ಕುಟುಂಬದ ಏಳು ಮಂದಿಯ ಸರಣಿ ಹತ್ಯೆ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಶಿರಾಡಿ ಘಾಟ್ ಅರಣ್ಯ ಪ್ರದೇಶದಲ್ಲಿ ಇಂದು ಮತ್ತೆರಡು ಮೃತದೇಹಗಳು ಪತ್ತೆಯಾಗಿವೆ. ಇದರೊಂದಿಗೆ ಪ್ರಕರಣದಲ್ಲಿ ಹತ್ಯೆಗೀಡಾದ ಎಲ್ಲ ಏಳು ಮಂದಿಯ ಮೃತದೇಹಗಳನ್ನು ಪೊಲೀಸರು ಪತ್ತೆಹಚ್ಚಿದಂತಾಗಿದೆ.



ಆರೋಪಿ ಇಂದುಶೇಖರ್ ನೀಡಿದ ಹೇಳಿಕೆಯ ಆಧಾರದ ಮೇಲೆ ಪೊಲೀಸರು ಇಂದು ಶಿರಾಡಿ ಘಾಟ್ ಅರಣ್ಯ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ನಡೆಸಿದರು. ಶಂಕರ್ ಮತ್ತು ನಳಿನಿ ದಂಪತಿಯನ್ನು ಕೊಲೆ ಮಾಡಿ, ಅವರ ಮೃತದೇಹಗಳನ್ನು ಕಾರಿನಲ್ಲಿ ತಂದು ಈ ಘಾಟ್ನ ಅರಣ್ಯ ಪ್ರದೇಶದಲ್ಲಿ ಎಸೆದಿರುವುದಾಗಿ ಆರೋಪಿ ಹೇಳಿದ್ದ ಎನ್ನಲಾಗಿದೆ.

ಆರೋಪಿ ಇಂದುಶೇಖರ್‌ನನ್ನು ಬಿಗಿ ಪೊಲೀಸ್ ಭದ್ರತೆಯಲ್ಲಿ ಸ್ಥಳಕ್ಕೆ ಕರೆದೊಯ್ಯಲಾಗಿತ್ತು. ಆತ ಮೃತದೇಹಗಳನ್ನು ಎಸೆದಿರುವ ಸ್ಥಳವನ್ನು ತೋರಿಸಿದ ತಕ್ಷಣ ಪೊಲೀಸರು ಪೊದೆಗಳಲ್ಲಿದ್ದ ಶವಗಳನ್ನು ಹೊರತೆಗೆದಿದ್ದಾರೆ. ಸ್ಥಳಕ್ಕೆ ವಿಧಿವಿಜ್ಞಾನ ಪ್ರಯೋಗಾಲಯದ (ಎಫ್ಎಸ್ಎಲ್) ತಜ್ಞರು ಹಾಗೂ ಸೋಕೋ ತಂಡದ ಸಿಬ್ಬಂದಿಯೂ ತೆರಳಿ ಪರಿಶೀಲನೆ ನಡೆಸಿದ್ದಾರೆ.

ನಿನ್ನೆ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಶಿವಕುಮಾರ್ ಮತ್ತು ದಿವ್ಯಾ ದಂಪತಿಯ ಮೃತದೇಹಗಳು ಪತ್ತೆಯಾಗಿದ್ದವು. ಅವುಗಳನ್ನು ಮೈಸೂರಿನ ಕೆ.ಆರ್. ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದ್ದು, ಇಂದು ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ಹಸ್ತಾಂತರಿಸಲು ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಇನ್ನು ಸೇಲಂನ ಅರಣ್ಯ ಪ್ರದೇಶದಲ್ಲಿ ಪತ್ತೆಯಾಗಿದ್ದ ಸುನಿತಾ ಮತ್ತು ರೂಪಾವತಿ ಅವರ ಮೃತದೇಹಗಳನ್ನು ನಗರಕ್ಕೆ ತಂದು ಅಂತ್ಯಸಂಸ್ಕಾರ ನೆರವೇರಿಸಲಾಗಿದೆ. ನಂದಿಬೆಟ್ಟದ ತಪ್ಪಲಿನಲ್ಲಿ ಪತ್ತೆಯಾಗಿದ್ದ ಬಾಲಕನ ಮೃತದೇಹವನ್ನು ನಗರಕ್ಕೆ ತಂದು ಶನಿವಾರ ಅಂತ್ಯಕ್ರಿಯೆ ನಡೆಸಲಾಗಿತ್ತು.

ಇದುವರೆಗೆ ಐದು ಮಂದಿಯ ಮೃತದೇಹಗಳನ್ನು ಪತ್ತೆಹಚ್ಚಿದ್ದ ಪೊಲೀಸರು, ಉಳಿದ ಇಬ್ಬರಿಗಾಗಿ ಶಿರಾಡಿ ಘಾಟ್‌ನಲ್ಲಿ ಶೋಧ ಕಾರ್ಯಾಚರಣೆ ಮುಂದುವರಿಸಿದ್ದರು. ಇಂದು ಶಂಕರ್ ಮತ್ತು ನಳಿನಿ ಅವರ ಮೃತದೇಹಗಳು ಪತ್ತೆಯಾಗುವುದರೊಂದಿಗೆ ಏಳು ಮಂದಿಯ ಮೃತದೇಹಗಳ ಪತ್ತೆ ಕಾರ್ಯ ಪೂರ್ಣಗೊಂಡಿದೆ.

ಅಗತ್ಯ ವಸ್ತುಗಳ ಬೆಲೆ ಏರಿಕೆ: ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿ.ವೈ. ವಿಜಯೇಂದ್ರ ವಾಗ್ದಾಳಿ
ಸರ್ಕಾರದ ವಿರುದ್ಧ ನ್ಯಾಯಾಲಯದ ಕಳವಳ ಜನರ ಸಂಕಷ್ಟಕ್ಕೆ ಸಾಕ್ಷಿ

"ಮುಂಜಾನೆಯ ಮೆರಗು"

ಬೆಂಗಳೂರು ನ, 09– ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ಅನುಭವಿಸುತ್ತಿರುವ ತೊಂದರೆಗಳ ಕುರಿತು ಉಚ್ಚ ನ್ಯಾಯಾಲಯ ವ್ಯಕ್ತಪಡಿಸಿರುವ ಕಳವಳವು ಸರ್ಕಾರದ ಆಡಳಿತ ವೈಖರಿಗೆ ಹಿಡಿದ ಕನ್ನಡಿಯಾಗಿದೆ. ಹಾಲು, ತುಪ್ಪ, ಅಕ್ಕಿ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ಹಾಗೂ ಬಸ್ ಪ್ರಯಾಣ ದರ ಏರಿಕೆ ಕುರಿತು ನ್ಯಾಯಮೂರ್ತಿಗಳು ಕಳವಳ ವ್ಯಕ್ತಪಡಿಸಿರುವುದು ಜನಸಾಮಾನ್ಯರ ಬದುಕಿನ ಮೇಲಿನ ಬೆಲೆ ಏರಿಕೆಯ ಪರಿಣಾಮವನ್ನು ಎತ್ತಿತೋರಿಸಿದೆ ಎಂದು ಅವರು ಹೇಳಿದ್ದಾರೆ.



ದೀಪಾವಳಿ ಹಬ್ಬದ ಸಂದರ್ಭದಲ್ಲಿ ನೆಮ್ಮದಿಯಿಂದ ದೀಪ ಹಚ್ಚಿ ಸಂಭ್ರಮಿಸಬೇಕಾದ ಜನರಿಗೆ ಬೆಲೆ ಏರಿಕೆ–ಯ ಸಂಕಷ್ಟ ಎದುರಾಗಿದೆ. 'ನರಕ ಸಂಕಷ್ಟದ ದೀಪ ಹಚ್ಚುವ ಪರಿಸ್ಥಿತಿ ನಿರ್ಮಾಣವಾಗಿದೆ' ಎಂಬ ನ್ಯಾಯಮೂರ್ತಿಗಳ ವ್ಯಾಖ್ಯಾನವು ರಾಜ್ಯದ ಜನರ ಬದುಕಿನ ವಾಸ್ತವ ಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ. ಒಂದು ಕಡೆ ಉಚಿತ ಭಾಗ್ಯಗಳನ್ನು ಘೋಷಿಸಿ, ಮತ್ತೊಂದೆಡೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸುವ ಮೂಲಕ ಜನರ ಮೇಲೆ ಆರ್ಥಿಕ ಹೊರೆ ಹೇರುತ್ತಿರುವುದು ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿಯಾಗಿದೆ ಎಂದು ಟೀಕಿಸಿದ್ದಾರೆ.

ಜನರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಸರ್ಕಾರ ವಿಫಲವಾಗಿದೆ. ಅಗತ್ಯ ವಸ್ತುಗಳ ಬೆಲೆ ನಿಯಂತ್ರಿಸುವ ಬದಲು ಸ್ಟಿಂಗ್ ಆಪರೇಷನ್‌ನಂತಹ ವಿಚಾರಗಳಲ್ಲಿ ಸರ್ಕಾರ ತೊಡಗಿಸಿಕೊಂಡಿದೆ. ಇದ–ರಿಂದ ಪ್ರಜಾಪ್ರಭುತ್ವ ವ್ಯವಸ್ಥೆಯ ಘನತೆಗೆ ಧಕ್ಕೆಯಾಗುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದ್ದಾರೆ.

ದೇಶದಲ್ಲಿ ಎಸ್ಐಆರ್ ಮತ್ತು ವಿವಿಧ ಚಳವಳಿಗಳ ವಿಚಾರದಲ್ಲಿ ರಾಜಕೀಯ ಮಾಡುತ್ತಿರುವ ಕಾಂಗ್ರೆಸ್ ನಾಯಕರು ರಾಜ್ಯದಲ್ಲಿನ ಅರಾಜಕತೆಯ ಪರಿಸ್ಥಿತಿಯನ್ನು ಗಮನಿಸಬೇಕು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ಪರಿಸ್ಥಿತಿ ನಿರ್ಮಾಣವಾಗುವ ಮುನ್ನವೇ ಮುಖ್ಯಮಂತ್ರಿ ರಾಜೀನಾಮೆ ನೀಡುವಂತೆ ರಾಹುಲ್ ಗಾಂಧಿ ಸೂಚಿಸಬೇಕು ಎಂದು ಆಗ್ರಹಿಸಿದ್ದಾರೆ.

ತಕ್ಷಣವೇ ಅಗತ್ಯ ವಸ್ತುಗಳ ಬೆಲೆ ಇಳಿಕೆಗೆ ಕ್ರಮ ಕೈಗೊಳ್ಳದಿದ್ದರೆ ಜನಾಕ್ರೋಶ ತೀವ್ರ ಸ್ವರೂಪ ಪಡೆದುಕೊಳ್ಳಲಿದೆ. ಬೆಲೆ ಏರಿಕೆಯಿಂದ ಕಂಗೆಟ್ಟಿರುವ ಜನರ ಆಕ್ರೋಶ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರ ನೀಡಲಿದೆ ಎಂದು ಬಿ.ವೈ. ವಿಜಯೇಂದ್ರ ಎಚ್ಚರಿಕೆ ನೀಡಿದ್ದಾರೆ.

ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದ ಪತಿಯನ್ನು ಕೊಂದಿದ್ದ ಪತ್ನಿ, ಪ್ರಿಯಕರ ಸೆರೆ

"ಮುಂಜಾನೆಯ ಮೆರಗು"

ಬೆಂಗಳೂರು, ನ.9– ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದ ಪತಿಯನ್ನು ಕೊಲೆ ಮಾಡಿ, ಹೃದಯಾಘಾತವೆಂದು ಬ

ವಿರೋಧ ಪಕ್ಷದವರು ಅಧಿಕಾರಕ್ಕಾಗಿ ಜಾತಕಪಕ್ಷಿಗಳಂತೆ ಕಾಯುತ್ತಿದ್ದಾರೆ: ಸಚಿವ ಟಿ.ರಘುಮೂರ್ತಿ

ಬಿಳಿಚೋಡು ಸೇರಿದಂತೆ ವಿವಿಧೆಡೆ 31.82 ಕೋಟಿ ಕಾಮಗಾರಿಗಳಿಗೆ ಚಾಲನೆ

"ಮುಂಜಾನೆಯ ಮೆರಗು"

ಜಗಳೂರು ನ, 09– ವಿರೋಧ ಪಕ್ಷದವರು ಅಧಿಕಾರಕ್ಕಾಗಿ ಜಾತಕಪಕ್ಷಿಗಳಂತೆ ಕಾಯುತ್ತಿದ್ದಾರೆ. ಆದರೆ ರಾಜ್ಯದ ಜನರಿಗೆ ಸತ್ಯಾಸತ್ಯತೆ ತಿಳಿದಿದ್ದು, ಮುಂದಿನ ಚುನಾವಣೆಯಲ್ಲಿ ಜನರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಟಿ.ರಘುಮೂರ್ತಿ ಹೇಳಿದರು.

ತಾಲೂಕಿನ ಬಿಳಿಚೋಡು ಗ್ರಾಮದಲ್ಲಿ ಒಟ್ಟು 31.82 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ, ಕೆಲವು ಕಾಮಗಾರಿಗಳನ್ನು ಉದ್ಘಾಟಿಸಿದ ಬಳಿಕ ಆಯೋಜಿಸಿದ್ದ ಸಾರ್ವಜನಿಕ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಾಸಕರಾಗುವುದು ಸಾಮಾನ್ಯ ಸಂಗತಿಯಲ್ಲ. ಆದರೆ ಜನರೊಂದಿಗೆ ಬೆರೆತು, ಸಾಹಿತ್ಯಿಕ ಹಾಗೂ ಸಾಮಾಜಿಕ ಚಿಂತನೆಯ ಶಕ್ತಿಯನ್ನು ಹೊಂದಿರುವ ವ್ಯಕ್ತಿಯಾಗಿ ಶಾಸಕ ಬಿ.ದೇವೇಂದ್ರಪ್ಪ ಅವರು ಗುರುತಿಸಿಕೊಂಡಿದ್ದಾರೆ. ಆರು ಬಾರಿ ಶಾಸಕರಾಗಿ ಜನಸೇವೆ ಮಾಡಿರುವ ಹಿರಿಯ ಶಾಸಕ ರಘುಮೂರ್ತಿ ತಿಪ್ಪಾರೆಡ್ಡಿ ಅವರಂತಹ ರಾಜಕಾರಣಿಗಳ ಅನುಭವವೂ ನಮಗೆ ಮಾರ್ಗದರ್ಶಿಯಾಗಿದೆ ಎಂದರು.

ಬಿಳಿಚೋಡು ಗ್ರಾಮ ರಾಜಕೀಯ, ಸಾಮಾಜಿಕ ಹಾಗೂ ಐತಿಹಾಸಿಕವಾಗಿ ವಿಶೇಷ ಹಿನ್ನೆಲೆ ಹೊಂದಿದೆ. ಈ ಗ್ರಾಮದಲ್ಲಿ ಅಶ್ವತ್ಥರೆಡ್ಡಿ ಅವರಂತಹ ನಾಯಕರು ಬೆಳೆದುಬಂದಿದ್ದಾರೆ. ಸುಮಾರು 50 ವರ್ಷಗಳಿಂದ ಗ್ರಾಮ ಪಂಚಾಯಿತಿ ಚುನಾವಣೆ ನಡೆಯದಿದ್ದರೂ ಎಲ್ಲ ಸಮುದಾಯದವರು ಅನ್ಯೋನ್ಯತೆಯಿಂದ ಜೀವನ ನಡೆಸುತ್ತಿರುವುದು ಗ್ರಾಮದ ಒಗ್ಗಟ್ಟಿಗೆ ಸಾಕ್ಷಿಯಾಗಿದೆ. ಗ್ರಾಮದ ಆಂಜನೇಯ ಸ್ವಾಮಿ ಆರಾಧ್ಯ ದೈವವಾಗಿದ್ದು, ಚನ್ನಯ್ಯ ಒಡೆಯರ್ ಹಾಗೂ ಭೀಮಣ್ಣ ನಾಯಕ ಅವರಂತಹ ಮಹನೀಯರು ಜನಿಸಿದ ಪುಣ್ಯಭೂಮಿ ಇದಾಗಿದೆ ಎಂದು ಸ್ಮರಿಸಿದರು.

ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದ ನಂತರ ತಮ್ಮದೇ ಆದ ಆಡಳಿತದ ಇತಿಹಾಸ ನಿರ್ಮಿಸಿದ್ದಾರೆ. ಪ್ರಸ್ತುತ ಸರ್ಕಾರ ಜನರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ ಪರಿಹರಿಸುವ ಉದ್ದೇಶದಿಂದ ಜನಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಭಾರತ್ ಜೋಡೋ ಯಾತ್ರೆ, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ರಾಜ್ಯದ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೂ ಸರ್ಕಾರ ಆದ್ಯತೆ ನೀಡಿದೆ ಎಂದು ತಿಳಿಸಿದರು.

ಮಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸುಮಾರು 16 ಸಾವಿರ ಕೋಟಿ ಮೊತ್ತದ ಅಭಿವೃದ್ಧಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ವಿರೋಧ ಪಕ್ಷದವರು ಸರ್ಕಾರದ ಜನಪರ ಕೆಲಸಗಳನ್ನು ಗುರುತಿಸುವ ಬದಲು ವೈಯಕ್ತಿಕ ಟೀಕೆಗಳಿಗೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ. ವೈಯಕ್ತಿಕ ಟೀಕೆಗಳಿಂದ ಜನರಿಗೆ ಯಾವುದೇ ಪ್ರಯೋಜನವಿಲ್ಲ. ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಏನು ಅನುದಾನ ಹಾಗೂ ಯೋಜನೆಗಳನ್ನು ತಂದಿದ್ದಾರೆ ಎಂಬುದನ್ನು ವಿರೋಧ ಪಕ್ಷದವರು ಜನರಿಗೆ ತಿಳಿಸಬೇಕು ಎಂದು ಸವಾಲು ಹಾಕಿದರು.

ಸಿರಿಗೆರೆ ಶ್ರೀಗಳು ಜನಪರ ಕಾಳಜಿಯಿಂದ ಸಮಾಜದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅಭಿವೃದ್ಧಿ ಕಾರ್ಯಗಳ ಜೊತೆಗೆ ಜನರಿಗೆ ಮೌಲ್ಯಯುತವಾದ ಸಂದೇಶಗಳನ್ನು ನೀಡುತ್ತಿರುವುದು ಶ್ಲಾಘನೀಯ ಎಂದರು.

ರಾಜ್ಯದಲ್ಲಿ ಪರಿಶಿಷ್ಟ ವರ್ಗಗಳ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸುಮಾರು 10 ಸಾವಿರ ಕೋಟಿ ಅನುದಾನ ಬಿಡುಗಡೆಯಾಗಿದ್ದರೂ ಅದು ಅರ್ಹ ಸಮುದಾಯಗಳಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂಬ ವಿಚಾರ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ರಾಜ್ಯ ಪರಿಷತ್ತಿನ ಸಭೆ ಕರೆದು ಅನುದಾನದ ಸದ್ಬಳಕೆ ಹಾಗೂ ಸಮುದಾಯಗಳಿಗೆ ಸೌಲಭ್ಯ ತಲುಪಿಸುವ ಕುರಿತು ಚರ್ಚಿಸಲಾಗುವುದು ಎಂದರು.

ನನ್ನ ರಾಜಕೀಯ ಹಾಗೂ ಸಾರ್ವಜನಿಕ ಸೇವೆಯನ್ನು ಗುರುತಿಸಿ ಪಕ್ಷ ಮತ್ತು ಸರ್ಕಾರ ಸಚಿವ ಸ್ಥಾನ ನೀಡಿವೆ. ವೈಯಕ್ತಿಕ ಬದುಕಿಗಿಂತ ಜನಸಾಮಾನ್ಯರ ಬದುಕು ಬಹಳ ಮುಖ್ಯ. ಅಧಿಕಾರ ಎನ್ನುವುದು ಜನರ ಸೇವೆ ಮಾಡಲು ಸಿಕ್ಕಿರುವ ಅವಕಾಶವಾಗಿದ್ದು, ಅದನ್ನು ಜನರ ಕಲ್ಯಾಣಕ್ಕಾಗಿ ಬಳಸಿಕೊಳ್ಳಬೇಕು ಎಂದು ಹೇಳಿದರು.

ಶಾಸಕ ಬಿ.ದೇವೇಂದ್ರಪ್ಪ ಮಾತನಾಡಿ, ಸಚಿವ ಟಿ.ರಘುಮೂರ್ತಿ ಅವರು ಮೂರು ಬಾರಿ ಶಾಸಕರಾಗಿ ಜನರ ವಿಶ್ವಾಸ ಗಳಿಸಿ ಇಂದು ಸಚಿವ ಸ್ಥಾನ ಅಲಂಕರಿಸಿದ್ದಾರೆ. ಅವರ ಸಾರ್ವಜನಿಕ ಸೇವೆ ಮತ್ತು ಕಾರ್ಯವೈಖರಿ ಮಾದರಿಯಾಗಿದೆ ಎಂದರು.

ಚಿಕ್ಕಮ್ಮನಹಟ್ಟಿ ಸೇರಿದಂತೆ ತಾಲೂಕಿನ ಕುಗ್ರಾಮಗಳ ಅಭಿವೃದ್ಧಿಗೂ ಆದ್ಯತೆ ನೀಡಲಾಗುತ್ತಿದೆ. ಗ್ರಾಮೀಣ ಭಾಗದ ಜನರ ಸಮಸ್ಯೆಗಳನ್ನು ಪರಿಹರಿಸುವುದರೊಂದಿಗೆ ಹಳ್ಳಿಯಿಂದ ದೆಹಲಿಯವರೆಗೆ ನಮ್ಮ ಭಾಗದ ಜನರ ಧ್ವನಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ರಾಜಕೀಯ ಹಿನ್ನೆಲೆ ಹೊಂದಿರುವ ಗ್ರಾಮಗಳು ನಮ್ಮ ಭಾಗದಲ್ಲಿದ್ದು, ಕಡಬನಕಟ್ಟೆ ಸೇರಿದಂತೆ ಹಲವು ಗ್ರಾಮಗಳು ರಾಜಕೀಯವಾಗಿ ವಿಶಿಷ್ಟ ಇತಿಹಾಸ ಹೊಂದಿವೆ ಎಂದು ಹೇಳಿದರು.

ಅಧಿಕಾರ ಎನ್ನುವುದು ಮೋಜು–ಮಸ್ತಿಗಾಗಿ ಇರುವುದಲ್ಲ. ಜನರ ಕಲ್ಯಾಣಕ್ಕಾಗಿ ಹಗಲಿರುಳು ಶ್ರಮಿಸಲು ಸಿಕ್ಕಿರುವ ಜವಾಬ್ದಾರಿಯಾಗಿದೆ. ಇತ್ತೀಚಿನ ದಿನಗಳಲ್ಲಿ ಕೆಲವರು ಅಧಿಕಾರಕ್ಕಾಗಿ ಮಾತ್ರ ರಾಜಕಾರಣ ಮಾಡುತ್ತಿದ್ದಾರೆ. ಆದರೆ ಜನಪ್ರತಿನಿಧಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಬಿಳಿಚೋಡು ಹಾಲುಮತ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿರುವ ಗ್ರಾಮವಾಗಿದ್ದು, ಭೀಮಣ್ಣ ನಾಯಕ ಹಾಗೂ ಚನ್ನಯ್ಯ ಒಡೆಯರ್ ಅವರಂತಹ ಮಹನೀಯರು ಜನಿಸಿದ ಗಂಡುಮೆಟ್ಟಿನ ನಾಡಾಗಿದೆ ಎಂದರು.

ಇದು ಪಾಳೆಗಾರಿಕೆ ಮಾಡುವ 15ನೇ ಶತಮಾನವಲ್ಲ ಎಂಬುದನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಭವಿಷ್ಯ ರೂಪಿಸಬೇಕು. ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಗಂಭೀರವಾಗಿ ಪರಿಗಣಿಸಿ ಉತ್ತಮ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.

ತಾಲೂಕಿನ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ. ಸುಮಾರು 9 ಕೋಟಿ ವೆಚ್ಚದಲ್ಲಿ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಕಲ್ಪಿಸಲಾಗಿದ್ದು, ಪ್ರತಿಷ್ಠಿತ ಖಾಸಗಿ ಶಾಲೆಗಳಿಗೂ ಕಡಿಮೆಯಿಲ್ಲದಂತೆ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಪೋಷಕರು ಮಕ್ಕಳ ಕಲಿಕೆಯ ಬಗ್ಗೆ ನಿರಂತರ ನಿಗಾ ವಹಿಸಬೇಕು. ಮೊಬೈಲ್ ಬಳಕೆಗೆ ಮಕ್ಕಳನ್ನು ಅತಿಯಾಗಿ ಪ್ರೋತ್ಸಾಹಿಸಬಾರದು ಎಂದು ಸಲಹೆ ನೀಡಿದರು.

ಗ್ರಾಮಗಳಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಗಂಗಾ ಕಲ್ಯಾಣ, ಸಾರಥಿ ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳು ಪಡೆದುಕೊಳ್ಳಬೇಕು ಎಂದರು.

ಕೆಪಿಸಿಸಿ ಪರಿಶಿಷ್ಟ ವರ್ಗಗಳ ಘಟಕದ ಮಾಜಿ ಅಧ್ಯಕ್ಷ ಕೆ.ಪಿ.ಪಾಲಯ್ಯ ಮಾತನಾಡಿ, ಸಚಿವ ಟಿ.ರಘುಮೂರ್ತಿ ಅವರು ಯಾರ ಶಿಫಾರಸಿನಿಂದಲೂ ಸಚಿವರಾದವರಲ್ಲ. ಸರ್ಕಾರ ಅವರ ಸೇವೆ ಹಾಗೂ ಕಾರ್ಯಕ್ಷಮತೆಯನ್ನು ಗುರುತಿಸಿ ಸಚಿವ ಸ್ಥಾನ ನೀಡಿದೆ. ಶಾಸಕ ಬಿ.ದೇವೇಂದ್ರಪ್ಪ ಅವರು ತಾಲೂಕಿನ ಅಭಿವೃದ್ಧಿಗೆ ವಿಶೇಷ ಒತ್ತು ನೀಡುತ್ತಿದ್ದು, ರಾಜ್ಯದಲ್ಲಿಯೇ ಮಾದರಿಯಾಗುವ ರೀತಿಯಲ್ಲಿ ಹಲವು ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದಾರೆ ಎಂದರು.

ಬಿಳಿಚೋಡು ಗ್ರಾಮದಲ್ಲಿ ದ್ವಿಮುಖ ಸಿಸಿ ರಸ್ತೆ, ಶಿಕ್ಷಣಕ್ಕೆ ಆದ್ಯತೆ ನೀಡಿ ಶಾಲಾ ಕೊಠಡಿಗಳು, ಗ್ರಂಥಾಲಯ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ತಾಲೂಕಿನ ಪ್ರತಿಯೊಂದು ಗ್ರಾಮದಲ್ಲಿಯೂ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಹಾಗೂ ಸಮುದಾಯದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

ಕೆಪಿಸಿಸಿ ಎಸ್ಟಿ ಘಟಕದ ಪ್ರಧಾನ ಕಾರ್ಯದರ್ಶಿ ಎಂ.ಡಿ.. ಕೀರ್ತಿಕುಮಾರ್ ಮಾತನಾಡಿ, ಬಿಜ್ಜುಗತ್ತಿ ಭರಮಣ್ಣ ನಾಯಕರು ಜನಿಸಿದ ಬಿಳಿಚೋಡು ಗ್ರಾಮವು ಐತಿಹಾಸಿಕ ಹಿನ್ನೆಲೆ ಹೊಂದಿದೆ. ಚಿತ್ರದುರ್ಗದ ಪಾಳೆಗಾರರಲ್ಲಿ ಪ್ರಮುಖರಾಗಿದ್ದ ಭರಮಣ್ಣ ನಾಯಕರು ಭರಮಸಾಗರ ಕೆರೆಯ ನಿರ್ಮಾತೃಗಳಾಗಿದ್ದಾರೆ. ಇಂತಹ ಐತಿಹಾಸಿಕ ಮಹತ್ವ ಹೊಂದಿರುವ ಗ್ರಾಮದಲ್ಲಿ ಶಾಸಕ ಬಿ. ದೇವೇಂದ್ರಪ್ಪ ಅವರು ಜನಪರ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿರುವುದು ಶ್ಲಾಘನೀಯ ಎಂದರು.

2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವುದರ ಜೊತೆಗೆ ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೂ ಹೆಚ್ಚಿನ ಆದ್ಯತೆ ನೀಡಿ ಸಾಕಷ್ಟು ಅನುದಾನ ಬಿಡುಗಡೆ ಮಾಡುತ್ತಿದೆ. ವಿರೋಧ ಪಕ್ಷದವರು ಗ್ಯಾರಂಟಿ ಯೋಜನೆಗಳ ಬಗ್ಗೆ ಟೀಕೆ ಮಾಡುತ್ತಿದ್ದರೂ, ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ಹಿನ್ನಡೆಯಾಗದಂತೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ಹೇಳಿದರು.


ಬಿಳಿಚೋಡು ಗ್ರಾಮವೊಂದಕ್ಕೆ ಸುಮಾರು 21 ಕೋಟಿ ಅನುದಾನ ನೀಡಲಾಗಿದೆ. ಅನುದಾನ ತರುವುದು ಎಷ್ಟು ಮುಖ್ಯವೋ, ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವುದು ಅಷ್ಟೇ ಮುಖ್ಯ. ಗ್ರಾಮದ ಸರ್ಕಾರಿ ಶಾಲೆಯ ಕೊಠಡಿಗಳ ನಿರ್ಮಾಣ, ಗ್ರಂಥಾಲಯ ಕಟ್ಟಡ, ಹೈಮಾಸ್ಟ್ ದೀಪಗಳ ಅಳವಡಿಕೆ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಬಿಳಿಚೋಡು ಗ್ರಾಮದ ಸೇತುವೆ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗುವುದು ಎಂದರು.

ಜಗಳೂರು ತಾಲೂಕಿನಲ್ಲಿ ಸಾಕಷ್ಟು ಕ್ರೀಡಾ ಪ್ರತಿಭೆಗಳಿದ್ದು, ಗ್ರಾಮೀಣ ಭಾಗದ ಯುವಕರಿಗೆ ಉತ್ತಮ ಅವಕಾಶ ಕಲ್ಪಿಸುವ ಉದ್ದೇಶದಿಂದ ಒಳಾಂಗಣ ಕ್ರೀಡಾಂಗಣ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗುತ್ತಿದೆ. ಇದರಿಂದ ಕ್ರೀಡಾಪಟುಗಳಿಗೆ ತರಬೇತಿ ಹಾಗೂ ತಮ್ಮ ಪ್ರತಿಭೆ ಪ್ರದರ್ಶಿಸಲು ಅನುಕೂಲವಾಗಲಿದೆ ಎಂದು ತಿಳಿಸಿದರು.

ಸಣ್ಣ ಕೈಗಾರಿಕೆ ಇಲಾಖೆಯಿಂದ 3.50 ಕೋಟಿ ಅನುದಾನ ನೀಡಲಾಗಿದ್ದು, ಅದನ್ನು ಹೆಚ್ಚುವರಿಯಾಗಿ 15 ಕೋಟಿಗೆ ಏರಿಸಲು ಕ್ರಮ ಕೈಗೊಳ್ಳಲಾಗಿದೆ. ತಾಲೂಕಿನಲ್ಲಿ ದುಡಿಯುವ ಕೈಗಳಿಗೆ ಸಾಕಷ್ಟು ಅವಕಾಶಗಳಿದ್ದು, ಕೈಗಾರಿಕೆಗಳ ಸ್ಥಾಪನೆಯಿಂದ ಸ್ಥಳೀಯ ಯುವಕರಿಗೆ ಉದ್ಯೋಗ ದೊರೆಯಲಿದೆ. ಈ ಯೋಜನೆಯಿಂದ ಸುಮಾರು 1,500 ಕಾರ್ಮಿಕರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಗುರುಬಸವರಾಜ್, ಕೆಂಚಪ್ಪ, ಲೋಕೋಪಯೋಗಿ ಇಲಾಖೆಯ ಎಇಇ ಶಶಿಕಾಂತ್, ಜಿಲ್ಲಾ ಪಂಚಾಯಿತಿ ಇಲಾಖೆಯ ಎಇಇ ಸಿ.ತಿಪ್ಪೇಸ್ವಾಮಿ, ತಾಲೂಕು ಕುರುಬ ಸಮಾಜದ ಅಧ್ಯಕ್ಷ ಓಮಣ್ಣ, ಕೆಪಿಸಿಸಿ ಸದಸ್ಯ ಕಲ್ಲೇಶ್ ರಾಜ್‌ಪಟೇಲ್, ಮುಖಂಡ ರಂಗಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.







ಪ್ರಮುಖ ಕಾಮಗಾರಿಗಳ ವಿವರ:

- 10 ಕೋಟಿ ವೆಚ್ಚದಲ್ಲಿ ಸೇತುವೆ ನಿರ್ಮಾಣ.
- 23.48 ಲಕ್ಷ ವೆಚ್ಚದಲ್ಲಿ ಗ್ರಂಥಾಲಯ ಕಟ್ಟಡ ಉದ್ಘಾಟನೆ.
- 25 ಲಕ್ಷ ವೆಚ್ಚದಲ್ಲಿ ಬಿಳಿಚೋಡು ಗ್ರಾಮದ ಸಿಸಿ ರಸ್ತೆ ನಿರ್ಮಾಣ.
- 1 ಕೋಟಿ ವೆಚ್ಚದಲ್ಲಿ ಬಿಳಿಚೋಡು ಗ್ರಾಮದಲ್ಲಿ ಸಮುದಾಯ ಭವನ ಉದ್ಘಾಟನೆ.
- 15.75 ಕೋಟಿ ವೆಚ್ಚದಲ್ಲಿ ಬಗ್ಗೇನಹಳ್ಳಿ ಗ್ರಾಮದಲ್ಲಿ ನೂತನ ಕೈಗಾರಿಕಾ ಪ್ರದೇಶ ಸ್ಥಾಪನೆ.
- 85.17 ಲಕ್ಷ ವೆಚ್ಚದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡ ನಿರ್ಮಾಣ.
- 73.50 ಲಕ್ಷ ವೆಚ್ಚದಲ್ಲಿ ನೂತನ ಕಾರ್ಯಪಾಲನಾ ಶಾಖಾ ಕಟ್ಟಡ ನಿರ್ಮಾಣ.
- 2 ಕೋಟಿ ವೆಚ್ಚದಲ್ಲಿ ಜಗಳೂರು ಪಟ್ಟಣದಲ್ಲಿ ಕ್ರೀಡಾ ಅಂಕಣ ನಿರ್ಮಾಣ.



ಎರಡು–ಮೂರು ದಿನಗಳಲ್ಲಿ ಬೋರ್‌ವೆಲ್ ಕೊರೆಸದಿದ್ದರೆ ತಾಲ್ಲೂಕು ಪಂಚಾಯಿತಿ ಕಚೇರಿ ಮುಂದೆ ಪ್ರತಿಭಟನೆ: ರೈತ ಸಂಘ ಎಚ್ಚರಿಕೆ



"ಮುಂಜಾನೆಯ ಮೆರಗು"

ಜಗಳೂರು: ನ, 09– ತಾಲೂಕಿನ ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮರೇನಹಳ್ಳಿ ಗ್ರಾಮದಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಗ್ರಾಮಸ್ಥರು ಪ್ರತಿದಿನ ಹನಿ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಗ್ರಾಮದಲ್ಲಿ ಬೋರ್‌ವೆಲ್ ಕೊರೆಸಿ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಇಲ್ಲವಾದಲ್ಲಿ ತಾಲ್ಲೂಕು ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ವಾಸುದೇವ ಮೇಟಿ ಬಣ ಎಚ್ಚರಿಕೆ ನೀಡಿದೆ.

ಗ್ರಾಮದಲ್ಲಿ ಕುಡಿಯುವ ನೀರಿನ ಅಭಾವ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಆದರೆ ಟ್ಯಾಂಕರ್ ಮೂಲಕ ಪೂರೈಕೆಯಾಗುತ್ತಿರುವ ನೀರು ಗ್ರಾಮದ ಜನರ ಅಗತ್ಯಕ್ಕೆ ತಕ್ಕಂತೆ ಸಾಕಾಗುತ್ತಿಲ್ಲ. ಇದರಿಂದ ಗ್ರಾಮಸ್ಥರು ಪ್ರತಿನಿತ್ಯ ಕುಡಿಯುವ ನೀರು ಸಂಗ್ರಹಿಸಿಕೊಳ್ಳಲು ಪರದಾಡುವಂತಾಗಿದೆ. ಜನರು ತಮ್ಮ ದೈನಂದಿನ ಅಗತ್ಯಗಳಿಗೂ ಸಮರ್ಪಕವಾಗಿ ನೀರು ದೊರೆಯದೆ ತೊಂದರೆ ಅನುಭವಿಸುತ್ತಿದ್ದಾರೆ.

ಬೇಸಿಗೆ ಆರಂಭಕ್ಕೂ ಮುನ್ನವೇ ಗ್ರಾಮದಲ್ಲಿ ಇಂತಹ ನೀರಿನ ಸಮಸ್ಯೆ ಎದುರಾಗಿರುವುದು ಆತಂಕಕಾರಿ ಸಂಗತಿಯಾಗಿದೆ. ತಾತ್ಕಾಲಿಕವಾಗಿ ಟ್ಯಾಂಕರ್ ಮೂಲಕ ನೀರು ಪೂರೈಸುವುದರಿಂದ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವುದಿಲ್ಲ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಸ